ಸಂಪುಟ : 11 ಸಂಚಿಕೆ: 12 ಪುಟ : 4+2 ಬೆಲೆ: 3.00 ಶನಿವಾರ ಫೆಬ್ರವರಿ 07 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 12 Pages : 4+2 Price : 3.00 Saturday February 07 2026 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

### ಪಂಚ ದೇವಾಲಯಗಳು, ಪಂಚ ಬಾವಿಗಳನ್ನು ಅನಾವರಣಗೊಳಿಸಿದ ಸಚಿವ ಎಚ್.ಕೆ. ಪಾಟೀಲ

# ಲಕ್ಕುಂಡಿಯ ಗತವೈಭವ ಅಂತಾರಾಷ್ಟ್ರೀಯ ಮಟ್ಟದಲ್ಲಿ ಪಸರಿಸಲಿ



> ಈ ಹಿಂದೆ ಲಕ್ಕುಂಡಿಯಲ್ಲಿ 10 ಪಲ್ಲಕ್ಕಿಗಳನ್ನು ತೆ-ಗೆದುಕೊಂಡು ಲಕ್ಕುಂಡಿಯ ಪ್ರತಿ ಬೀದಿಗೆ ಬಂದಾಗ ನೀವು ನಿಮ್ಮ ಮನೆಯಲ್ಲಿನ ಶಿಲ್ಪ, ವಾಸ್ತು, ಮುತ್ತು, ಹವಳ, ಆಯುಧಗಳನ್ನು ನೀಡಿದ್ದೀರಿ. ಲಕ್ಕುಂಡಿಯ ಜನರು ವಿಶಾಲ ಮನೋಭಾವವುಳ್ಳವರು. ಲಕ್ಕುಂಡಿಯ ಪ್ರಜ್ವಲ ರಿತ್ತಿ ಕುಟುಂಬದವರ ಪ್ರಾಮಾಣಿಕತೆ ಹಾಗೂ ಪಾರದರ್ಶಕತೆಯನ್ನು ಎಲ್ಲರೂ ಮೆಚ್ಚುವಂತಹದ್ದಾಗಿದೆ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೂಡ ರಿತ್ತಿ ಕುಟುಂಬದವರನ್ನು ಅಭಿನಂದಿಸಿದ್ದಾರೆ.
>
> – ಎಚ್.ಕೆ. ಪಾಟೀಲ.
> ಜಿಲ್ಲಾ ಉಸ್ತುವಾರಿ ಸಚಿವರು.

> ವಿದ್ಯಾಶಂಕರಲಿಂಗ ದೇವಾಲಯ, ಸೋಮನಕಟ್ಟಿ ಸೋಮಲಿಂಗೇಶ್ವರ ದೇವಾಲಯ, ಚೌಕಿಮಠದ ಈಶ್ವರ ದೇವಾಲಯ, ಚೌಕಿಮಠದ ಅರ್ಧ ನಾರೀಶ್ವರ ದೇವಾಲಯ, ಕಪ್ಪಚರಮಠ ಮತ್ತು ಬಾವಿಗಳನ್ನು ಅನಾವರಣಗೊಳಿಸಲಾಯಿತು. ಅಂತೆಯೇ ಛಬ್ಬೇರ ಬಾವಿ, ಸಿದ್ದರಬಾವಿ, ಫಕ್ಕೀರಸ್ವಾಮಿ ಮಠದ ಬಾವಿ, ಚೌಕಿಮಠದ ಬಾವಿ, ಸೋಮನಕಟ್ಟಿ ಸೋಮಲಿಂಗೇಶ್ವರ ಬಾವಿಗಳನ್ನು ಅನಾವರಣಗೊಳಿಸಲಾಯಿತು.



■ ವಿಜಯಸಾಕ್ಷಿ ಸುದ್ದಿ, ಗದಗ

ಈಗಾಗಲೇ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಲಕ್ಕುಂಡಿ ಉತ್ಖನನ ಕಾರ್ಯ ಆರಂಭಿಸಲಾಗಿದೆ. ಲಕ್ಕುಂಡಿಯ ಗತವೈಭವ ಅಂತಾರಾಷ್ಟ್ರೀಯ ಮಟ್ಟದಲ್ಲಿ ಪಸರಿಸಬೇಕು ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಆಶಿಸಿದರು.

ಲಕ್ಕುಂಡಿಯ ಚೌಕಿಮಠದ ಆವರಣದಲ್ಲಿ ಶುಕ್ರವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಪ್ರವಾಸೋದ್ಯಮ ಇಲಾಖೆ, ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಮೈಸೂರು, ಲಕ್ಕುಂಡಿ ಪಾರಂಪರಿಕ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಗದಗ ಇವರುಗಳ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯಲ್ಲಿನ ಪಂಚ ದೇವಾಲಯಗಳು ಮತ್ತು ಪಂಚ ಬಾವಿಗಳನ್ನು ಅನಾವರಣಗೊಳಿಸಿ ಮಾತನಾಡಿದರು.

ಗಣರಾಜ್ಯೋತ್ಸವ ದಿನಾಚರಣೆಯಂದು ನಾವು ಹೇಳಿದಂತೆ ಲಕ್ಕುಂಡಿಯ ಪಂಚದೇವಾಲಯ, ಪಂಚ ಬಾವಿ ಅನಾವರಣ ಮಾಡಿದ್ದೇವೆ. ಉತ್ಖನನ ಕಾರ್ಯದಲ್ಲಿ ಶಿಲ್ಪಕಲೆ, ಪ್ರಾಚ್ಯಾವಶೇಷಗಳನ್ನು ಹೊರತಂದು ಲಕ್ಕುಂಡಿಯ ಗತವೈಭವ ಮರುಕಳಿಸುವಂತಾಗಬೇಕು. ಈ ಉತ್ಖನನ ಕಾರ್ಯ ಕೇವಲ ಆ ಸ್ಥಳದಲ್ಲಿನ ಬಂಗಾರ ಗುರುತಿಸುವುದಕ್ಕಲ್ಲ. ಆದರೆ ಲಕ್ಕುಂಡಿಯಲ್ಲಿನ ಭವ್ಯ ಐತಿಹಾಸಿಕ, ಸಾಂಸ್ಕೃತಿಕ, ಶಿಲ್ಪಕಲೆಗಳನ್ನು ಪುನರುಜ್ಜೀವನಗೊಳಿಸುವುದಕ್ಕಾಗಿದೆ. ಇಲ್ಲಿನ 101 ಬಾವಿ ಹಾಗೂ 101 ದೇವಾಲಯಗಳನ್ನು ಗುರುತಿಸುವ ಕಾರ್ಯ ಇನ್ನೂ ನಡೆಯುತ್ತಿದೆ. ಸಿಕ್ಕಿರುವ ದೇವಾಲಯ, ಬಾವಿ ಪುನರುಜ್ಜೀವನ ನಡೆಸುತ್ತೇವೆ. ಈ ದೇವಾಲಯಗಳಿಗೆ ರಸ್ತೆ ಸಂಪರ್ಕ ಒದಗಿಸಲು ಈಗಾಗಲೇ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ. ತಪ್ಪು ಕಲ್ಪನೆಗಳನ್ನು ಬದಿಗಿಟ್ಟು ವಾಸ್ತವತೆಯನ್ನು ▸▸ 3ನೇ ಪುಟಕ್ಕೆ

## ಅಪಘಾತದಲ್ಲಿ ಮೃತಪಟ್ಟ ಕುಟುಂಬಗಳಿಗೆ ಪರಿಹಾರ



■ ವಿಜಯಸಾಕ್ಷಿ ಸುದ್ದಿ, ರೋಣ

ರೋಣ ತಾಲೂಕಿನ ಜಿಗಳೂರ ಗ್ರಾಮದ ಬಳಿ ಗುರುವಾರ ಬೆಳಗಿನ ಜಾವ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಮೂವರು ಕೃಷಿ ಕೂಲಿ ಕಾರ್ಮಿಕ ಮಹಿಳೆಯರು ಮೃತ ಪಟ್ಟಿದ್ದರಲ್ಲದೆ 15 ಜನ ಗಾಯಗೊಂಡಿದ್ದರು. ಈ ಹಿನ್ನೆಲೆಯಲ್ಲಿ ಶಾಸಕ ಜಿ.ಎಸ್. ಪಾಟೀಲ ಸರಕಾರದಿಂದ ಮೃತರ ಕುಟುಂಬಗಳಿಗೆ ತಲಾ 2 ಲಕ್ಷ ರೂ ಹಾಗೂ ಗಾಯಗೊಂಡವರಿಗೆ ತಲಾ 50 ಸಾವಿರ ರೂಗಳ ಪರಿಹಾರವನ್ನು ಬಿಡುಗಡೆಗೊಳಿಸಿದ್ದಾರೆ.

ಈ ಕುರಿತು ಶಾಸಕ ಜಿ.ಎಸ್. ಪಾಟೀಲರವರ ಸಾರ್ವಜನಿಕ ಸಂಪರ್ಕ ಕಾರ್ಯಾಲಯದಿಂದ ಶುಕ್ರವಾರ ಪ್ರಕಟಣೆ ಹೊರಡಿಸಲಾಗಿದೆ.

ಈ ಕುರಿತು ಪತ್ರಿಕೆಯೊಂದಿಗೆ ಮಾತನಾಡಿದ ಶಾಸಕ ಜಿ.ಎಸ್. ಪಾಟೀಲ, ಸ್ವತಃ ನಾನೇ ಮತ್ತೊಮ್ಮೆ ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಖುದ್ದು ಭೇಟಿಯಾಗಿ ಪರಿಹಾರ ಮೊತ್ತವನ್ನು ಹೆಚ್ಚಿಸುವ ಕುರಿತು ಚರ್ಚಿಸುತ್ತೇನೆ ಮತ್ತು ಶೀಘ್ರವೇ ಗಜೇಂದ್ರಗಡ ಪಟ್ಟಣಕ್ಕೆ ತೆರಳಿ ಮೃತ ಕುಟುಂಬಸ್ಥರ ಹಾಗೂ ಗಾಯಾಳುಗಳ ಕುಟುಂಬಸ್ಥರಿಗೆ ಧೈರ್ಯ ತುಂಬಲಿದ್ದೇನೆ. ಇಂತಹ ದುರ್ಘಟನೆ ನಡೆದಿದ್ದು ನನ್ನ ಮನಸ್ಸಿಗೆ ಅತೀವ ನೋವು ತಂದಿದೆ ಎಂದರು.

### ಅಪಘಾತದಲ್ಲಿ ಮೃತಪಟ್ಟವರ ಕುಟುಂಬಸ್ಥರನ್ನು ಭೇಟಿ ಮಾಡಿ ಸಾಂತ್ವನ ಹೇಳಿದ ಶಾಸಕ ಜಿ.ಎಸ್. ಪಾಟೀಲ

# ‘ದುಡಿಮೆಗಾಗಿ ಹೊರಟವರಿಗೆ ಹೀಗಾಗಬಾರದು’



> ಮೃತ ಕುಟುಂಬಗಳಿಗೆ ತಕ್ಷಣ ಪರಿಹಾರ ಧನ ಬಿಡುಗಡೆ ಆಗಬೇಕು. ಅಲ್ಲದೆ ಸರ್ಕಾರ ನೀಡುವ ಪರಿಹಾರವನ್ನು ಕನಿಷ್ಠ 10 ಲಕ್ಷ ರೂ.ಗಳಿಗೆ ಹೆಚ್ಚಿಸಬೇಕು. ಗಾಯಾಳುಗಳಿಗೆ 2 ಲಕ್ಷ ರೂ ನೀಡಬೇಕು. ಕೇವಲ ಸರ್ಕಾರದ ಪರಿಹಾರವಲ್ಲ, ವೈಯಕ್ತಿಕ ನೆರವಿಗೂ ಒತ್ತು ನೀಡಬೇಕು.
>
> – ದಾವಲಸಾಬ ತಾಳಿಕೋಟಿ.
> ಮುಸ್ಲಿಂ ಸಮಾಜದ ಮುಖಂಡರು.

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ರೋಣ ತಾಲೂಕಿನ ಜಿಗಳೂರ ಗ್ರಾಮದ ಬಳಿ ಸಂಭವಿಸಿದ ಭೀಕರ ರಸ್ತೆ ಅಪಘಾತವು ಇಡೀ ತಾಲೂಕನ್ನೇ ಶೋಕದಲ್ಲಿ ಮುಳುಗಿಸಿದೆ. ಕೂಲಿ ಕೆಲಸಕ್ಕಾಗಿ ತೆರಳುತ್ತಿದ್ದ ಕಾರ್ಮಿಕರನ್ನು ಹೊತ್ತ ಕ್ರೂಸರ್ ಹಾಗೂ ಕ್ಯಾಂಟರ್ ನಡುವೆ ಸಂಭವಿಸಿದ ಈ ದುರ್ಘಟನೆಯಲ್ಲಿ ಮೂವರು ಕಾರ್ಮಿಕರು ಸ್ಥಳದಲ್ಲೇ ಪ್ರಾಣ ಕಳೆದುಕೊಂಡಿದ್ದು, 15ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದರು.

ಗಜೇಂದ್ರಗಡದಿಂದ ರೋಣದತ್ತ ಸಾಗುತ್ತಿದ್ದ ಕ್ರೂಸರ್ ವಾಹನಕ್ಕೆ, ನಿಯಂತ್ರಣ ತಪ್ಪಿದ ಕ್ಯಾಂಟರ್ ಅಪ್ಪಳಿಸಿದ ಪರಿಣಾಮ ವಾಹನ ಸಂಪೂರ್ಣವಾಗಿ ನುಜ್ಜುಗುಜ್ಜಾಗಿ ರಸ್ತೆ ಮೇಲೆ ತಿರುಗಿಬಿದ್ದಿತ್ತು. ವಿಷಯ ತಿಳಿದ ರೋಣ ವಿಧಾನಸಭಾ ಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ ಶುಕ್ರವಾರ ಸಂಜೆ ಗಜೇಂದ್ರಗಡ ಪಟ್ಟಣದ ಶಿವಾಜಿ ಪೇಟೆ ಹಾಗೂ ವಾಜಪೇಯಿ ನಗರದಲ್ಲಿರುವ ಮೃತರಾದ ಮರಿಮಬೀ ಹುನಗುಂದ, ಅನ್ನಪೂರ್ಣ ಬಾಗೋಜಿ, ಸುಜಾತಾ ಹೊಸಮನಿ ಅವರ ನಿವಾಸಗಳಿಗೆ ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. ದುಡಿಮೆಗಾಗಿ ಹೊರಟ ಬಡ ಕಾರ್ಮಿಕರ ಜೀವ ಹೀಗೆ ರಸ್ತೆಯಲ್ಲಿ ಕಳೆದು ಹೋಗುವುದು ನೋವಿನ ಸಂಗತಿ. ಈ ನೋವನ್ನು ಸಂಪೂರ್ಣವಾಗಿ ತೀರಿಸಲಾಗದು. ಆದರೆ, ಸರ್ಕಾರ ಅವರ ಕುಟುಂಬದವರ ಬೆಂಬಲಕ್ಕೆ ನಿಲ್ಲಲಿದೆ ಎಂದು ಹೇಳಿದರು.


ಮೃತರ ಕುಟುಂಬಗಳಿಗೆ ಮುಖ್ಯಮಂತ್ರಿ ಪರಿಹಾರ ನಿಧಿಯಿಂದ ತಲಾ 2 ಲಕ್ಷ ರೂ ಹಾಗೂ ಗಾಯಗೊಂಡವರಿಗೆ 50 ಸಾವಿರ ರೂ ಪರಿಹಾರ ನೀಡಲಾಗುವುದು. ಅಗತ್ಯ ದಾಖಲೆಗಳ ಪರಿಶೀಲನೆ ಪ್ರಗತಿಯಲ್ಲಿದ್ದು, ಶೀಘ್ರದಲ್ಲೇ ಪರಿಹಾರದ ಧನ ಬಿಡುಗಡೆ ಮಾಡಲಾಗುವುದು ಎಂದು ಅವರು ಭರವಸೆ ನೀಡಿದರು. ಅಪಘಾತಕ್ಕೆ ಕಾರಣವಾದ ಕ್ಯಾಂಟರ್ ಚಾಲಕನ ಅತಿವೇಗ ಹಾಗೂ ನಿರ್ಲಕ್ಷ್ಯದ ಚಾಲನೆಯ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಗುವುದು ಎಂದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಸಿದ್ದಣ್ಣ ಬಂಡಿ, ಶಿವರಾಜ ಘೋರ್ಪಡೆ, ಶೇಖಪ್ಪ ರಾಮಜಿ, ರಾಜು ಸಾಂಗ್ಲಿಕರ್, ಮುರ್ತುಜಾ ಡಾಲಾಯತ, ಅರ್ಜುನ್ ರಾಠೋಡ, ಪ್ರಭು ಚವಡಿ, ಶ್ರೀಧರ ಬಿದರಳ್ಳಿ ಸೇರಿದಂತೆ ಮುಖಂಡರು ಹಾಗೂ ಸ್ಥಳೀಯಯರು ಉಪಸ್ಥಿತರಿದ್ದರು.

### ನಿರ್ದಾಕ್ಷಿಣ್ಯ ಕ್ರಮದ ಎಚ್ಚರಿಕೆ ನೀಡಿದ ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

## ಕಿಡಿಗೇಡಿಗಳ ಕೃತ್ಯ; ನೀರು ಪೂರೈಕೆಯಲ್ಲಿ ವ್ಯತ್ಯಯ





> ಸಾರ್ವಜನಿಕ ಸೇವೆಗೆ ಅಡ್ಡಿಯಾಗುವ ಇಂತಹ ಕೃತ್ಯಗಳನ್ನು ತಡೆಯಲು ಎಲ್ಲರ ಸಹಕಾರ ಅಗತ್ಯವಿದ್ದು, ನಗರದ ಪ್ರಜೆಗಳು ಜಾಗೃತೆಯಿಂದ ವರ್ತಿಸಿ ಆಡಳಿತಕ್ಕೆ ಮಾಹಿತಿ ನೀಡಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ತಿಳಿಸಿದ್ದಾರೆ.

■ ವಿಜಯಸಾಕ್ಷಿ ಸುದ್ದಿ, ಗದಗ

ಕಿಡಿಗೇಡಿಗಳು ನೀರು ಸರಬರಾಜು ಪೈಪ್‌ಲೈನ್‌ಗಳಲ್ಲಿ ಕಲ್ಲು, ಬಾಟಲಿಗಳು ಸೇರಿದಂತೆ ವಿವಿಧ ವಸ್ತುಗಳನ್ನು ತುಂಬಿ ನೀರು ಸರಬರಾಜು ವ್ಯವಸ್ಥೆಗೆ ಅಡ್ಡಿಪಡಿಸಿರುವ ಪರಿಣಾಮ ಅವಳಿ ನಗರದಲ್ಲಿ ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದ್ದಾರೆ.

**ಪ್ರಕರಣ 1:** ನಗರದ ಭೀಷ್ಮಕೆರೆ ಎದುರಿನ ಬನ್ನಿಕಟ್ಟಿ ಹತ್ತಿರದಲ್ಲಿ ಕೆಲವು ದಿನಗಳ ಹಿಂದೆ ನೀರು ಪೈಪ್‌ಲೈನ್ ಮೂಲಕ ಸರಬರಾಜು ಆಗದ ಹಿನ್ನೆಲೆ ಲೈನ್ ತೆರೆಯಿಸಿ ಪರಿಶೀಲನೆ ನಡೆಸಿದಾಗ, ಕಿಡಿಗೇಡಿಗಳು ನೀರು ಸರಬರಾಜು ಪೈಪ್‌ಲೈನ್‌ನಲ್ಲಿ ದೊಡ್ಡ ಹಾಗೂ ಸಣ್ಣ ಗಾತ್ರದ ಕಲ್ಲುಗಳನ್ನು ತುಂಬಿರುವುದು ಪತ್ತೆಯಾಗಿದೆ. ಈ ಕೃತ್ಯ ದುರುದ್ದೇಶಪೂರ್ವಕವಾಗಿದ್ದು, ಆರೋಪಿಗಳನ್ನು ಪತ್ತೆಹಚ್ಚಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

**ಪ್ರಕರಣ 2:** ಬೆಟಗೇರಿಯ ಮಂಜುನಾಥ ನಗರ ಪ್ರದೇಶದಲ್ಲಿ ಐದು ಇಂಚು ಹಾಗೂ ಎರಡು ಇಂಚು ಲೈನ್‌ಗಳಲ್ಲಿ ಬಾಟಲಿಗಳು ಮತ್ತು ಕಲ್ಲುಗಳು ಸಿಲುಕಿಕೊಂಡ ಪರಿಣಾಮ ನೀರು ಸರಬರಾಜು ಅಸ್ತವ್ಯಸ್ತಗೊಂಡಿದೆ. ಮುಖ್ಯ ಲೈನ್ ತೆರೆಯಿಸಿ ಪರಿಶೀಲಿಸಿದಾಗ ಅನೇಕ ಕಡೆ ಲೈನ್‌ಗಳನ್ನು ಉದ್ದೇಶಪೂರ್ವಕವಾಗಿ ಬ್ಲಾಕ್ ಮಾಡಿರುವುದು ಕಂಡು ಬಂದಿದೆ. ಇದರಿಂದ ಹಲವಾರು ಭಾಗಗಳಿಗೆ ನೀರು ಸರಿಯಾಗಿ ತಲುಪುತ್ತಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಇಂತಹ ಘಟನೆಗಳನ್ನು ಜಿಲ್ಲಾಡಳಿತ ಗಂಭೀರವಾಗಿ ಪರಿಗಣಿಸಿದ್ದು, ಸಂಬಂಧಿಸಿದವರನ್ನು ಪತ್ತೆಹಚ್ಚಿ ಕಾನೂನು ಕ್ರಮ ಜರುಗಿಸಲಾಗುವುದು. ಕಿಡಿಗೇಡಿಗಳ ಈ ದುಷ್ಕೃತ್ಯದಿಂದ ಸಾರ್ವಜನಿಕರಿಗೆ ನೀರು ಸರಬರಾಜು ವಿಳಂಬವಾಗಿದ್ದು, ಇದು ಅತ್ಯಂತ ಗಂಭೀರ ವಿಷಯವಾಗಿದೆ. ▸▸ 4ನೇ ಪುಟಕ್ಕೆ

## ದಿ. ಕೆ.ಎಚ್. ಪಾಟೀಲರ ಸಂಸ್ಮರಣೆ ಕಾರ್ಯಕ್ರಮ



■ ವಿಜಯಸಾಕ್ಷಿ ಸುದ್ದಿ, ಗದಗ

ಸಹಕಾರಿ ರಂಗದ ಭೀಷ್ಮ ದಿ. ಕೆ.ಎಚ್. ಪಾಟೀಲರ ಪುಣ್ಯತಿಥಿಯ ನಿಮಿತ್ತ ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ವತಿಯಿಂದ ಮಾಲಾರ್ಪಣೆ ಕಾರ್ಯಕ್ರಮ ಫೆ. 9ರಂದು ಬೆಳಿಗ್ಗೆ 10 ಗಂಟೆಗೆ ನಗರದ ದಿ. ಕೆ.ಎಚ್. ಪಾಟೀಲರ ವೃತ್ತದ ಬಳಿ ಆಯೋಜಿಸಲಾಗಿದೆ.

ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರುಗಳು, ಪಕ್ಷದ ಜಿಲ್ಲಾ ಪಧಾದಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ, ಎಪಿಎಂಸಿ ಪಕ್ಷದ ಅಧ್ಯಕ್ಷರು ಹಾಗೂ ಸದಸ್ಯರು, ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ ಅಧ್ಯಕ್ಷರು ಹಾಗೂ ಸದಸ್ಯರು, ಪ್ರಚಾರ ಸಮಿತಿ, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್ಸಿ/ಎಸ್ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ, ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವೀಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲಿಗಲ್ ರೀಫಾರ್ಮ್ಸ್ ವಿಭಾಗ, ಐಟಿ ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗಗಳ ಅಧ್ಯಕ್ಷರು ಹಾಗೂ ಸದಸ್ಯರು, ಪಕ್ಷದ ಅಭಿಮಾನಿಗಳು ಪಾಲ್ಗೊಳ್ಳಬೇಕೆಂದು ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿಯ ಅಧ್ಯಕ್ಷ ಅಶೋಕ ಮಂದಾಲಿ ವಿನಂತಿಸಿದ್ದಾರೆ.

## ಕಾ.ನಿ.ಪ ನವೀಕೃತ ಕಚೇರಿ ಉದ್ಘಾಟನೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮುಳಗುಂದ ರಸ್ತೆಯ ಪತ್ರಿಕಾ ಭವನದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷರ ಹಾಗೂ ಪದಾಧಿಕಾರಿಗಳ ನವೀಕೃತ ಕಚೇರಿ ಉದ್ಘಾಟನೆ, ಪ್ರವೇಶ ದ್ವಾರದ ನಾಮಫಲಕ ಅನಾವರಣ ಹಾಗೂ ತಾಲೂಕು ಘಟಕಗಳ ನೂತನ ಪದಾಧಿಕಾರಿಗಳಿಗೆ ಆಯ್ಕೆ ಪ್ರಮಾಣಪತ್ರ ವಿತರಣೆ ಕಾರ್ಯಕ್ರಮವನ್ನು ಫೆ. 7ರಂದು ಬೆಳಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ.

ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಕಚೇರಿ ಉದ್ಘಾಟನೆಗೊಳಿಸಿ, ನಾಮಫಲಕ ಅನಾವರಣಗೊಳಿಸುವರು. ನಿಕಟಪೂರ್ವ ಮುಖ್ಯಮಂತ್ರಿಗಳು ಹಾಗೂ ಗದಗ-ಹಾವೇರಿ ಲೋಕಸಭಾ ಸದಸ್ಯ ಬಸವರಾಜ ಬೊಮ್ಮಾಯಿ ಕಾರ್ಯಕ್ರಮ ಉದ್ಘಾಟಿಸಿ, ತಾಲೂಕು ಘಟಕಗಳ ನೂತನ ಪದಾಧಿಕಾರಿಗಳಿಗೆ ಪ್ರತಿಜ್ಞಾವಿಧಿ ಬೋಧನೆ ಮಾಡುವರು.

ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತ ರಾಜಾರಾಮ್ ಪವಾರ, ಕಾ.ನಿ.ಪ ರಾಜ್ಯ ಕಾರ್ಯದರ್ಶಿ ನಿಂಗಪ್ಪ ಚಾವಡಿ ಆಗಮಿಸುವರು. ಕಾ.ನಿ.ಪ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ ಅಧ್ಯಕ್ಷತೆ ವಹಿಸುವರು.




ರಾಜ್ಯ ಕಾರ್ಯಕಾರಿಣಿ ಸದಸ್ಯ ಅರುಣಕುಮಾರ ಹಿರೇಮಠ, ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ, ಉಪಾಧ್ಯಕ್ಷ ಅನಿಲ ತೆಂಬದಮನಿ, ಪ್ರಭುಸ್ವಾಮಿ ಅರವಟಗಿಮಠ, ವಿ.ಡಿ. ಕಣವಿ, ಕಾರ್ಯದರ್ಶಿ ಸಂಗಪ್ಪ ವ್ಯಾಪಾರಿ, ಬನೇಶ ಕುಲಕರ್ಣಿ, ಚಂದ್ರಶೇಖರ ಕುಸ್ಲಾಪೂರ, ಖಜಾಂಚಿ ರಾಮಣ್ಣ ವಗ್ಗಿ ಸೇರಿ ಜಿಲ್ಲಾ ಕಾರ್ಯಕಾರಿಣಿ ಸದಸ್ಯರು ಭಾಗವಹಿಸುವರು.

ಕಾ.ನಿ.ಪ ಗಜೇಂದ್ರಗಡ ತಾಲೂಕು ಅಧ್ಯಕ್ಷ ಮಂಜುನಾಥ ರಾಠೋಡ, ಪ್ರಧಾನ ಕಾರ್ಯದರ್ಶಿ ಎಸ್.ಎಂ. ಸೈಯದ್, ಮುಂಡರಗಿ ತಾಲೂಕು ಅಧ್ಯಕ್ಷ ಶಿವಮೂರ್ತಿ ಹೊಂಬಳಗಟ್ಟಿ, ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನಗೌಡ ಪಾಟೀಲ, ಶಿರಹಟ್ಟಿ ತಾಲೂಕು ಅಧ್ಯಕ್ಷ ಎಂ.ಎಂ. ಸ್ವಾಮಿ, ಪ್ರಧಾನ ಕಾರ್ಯದರ್ಶಿ ರಾಘವೇಂದ್ರ ಕುಲಕರ್ಣಿ, ಲಕ್ಷ್ಮೇಶ್ವರ ತಾಲೂಕು ಅಧ್ಯಕ್ಷ ಅಶೋಕ ಸೊರಟೂರ, ಪ್ರಧಾನ ಕಾರ್ಯದರ್ಶಿ ಪರಮೇಶ ಲಮಾಣಿ, ನರಗುಂದ ತಾಲೂಕು ಅಧ್ಯಕ್ಷ ಎಸ್.ಎಸ್. ಖಾನಪ್ಪಗೌಡ್ರ, ಪ್ರಧಾನ ಕಾರ್ಯದರ್ಶಿ ರಾಜೇಸಾಬ ಹೊಸಮನಿ ಹಾಗೂ ರೋಣ ತಾಲೂಕು ಅಧ್ಯಕ್ಷ ಮೆಹಬೂಬಸಾಬ ಮೋತೆಖಾನ, ಪ್ರಧಾನ ಕಾರ್ಯದರ್ಶಿ ವಿರೂಪಾಕ್ಷಿ ಕಲಬುರ್ಗಿ ಸೇರಿ ತಾಲೂಕು ಘಟಕಗಳ ಎಲ್ಲ ಪದಾಧಿಕಾರಿಗಳು ಪ್ರತಿಜ್ಞಾವಿಧಿ ಸ್ವೀಕರಿಸುವರು.

## 1.50 ಕೋಟಿ ರೂ. ಐಟಿ ದಂಡ ಪ್ರಶ್ನಿಸಿ ಟಿವಿಕೆ ಮುಖ್ಯಸ್ಥ ವಿಜಯ್ ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸಿದ ಮದ್ರಾಸ್ ಹೈಕೋರ್ಟ್

■ ವಿಜಯಸಾಕ್ಷಿ ಸುದ್ದಿ, ಚೆನ್ನೈ

2015–16ರ ಮೌಲ್ಯಮಾಪನ ವರ್ಷದಲ್ಲಿ ಆದಾಯ ಬಹಿರಂಗಪಡಿಸದಿದ್ದಕ್ಕಾಗಿ 1.50 ಕೋಟಿ ರೂ. ದಂಡ ವಿಧಿಸಿದ ಆದಾಯ ತೆರಿಗೆ ಇಲಾಖೆಯ ಆದೇಶವನ್ನು ಪ್ರಶ್ನಿಸಿ ನಟ–ರಾಜಕಾರಣಿ ವಿಜಯ್ ಸಲ್ಲಿಸಿದ್ದ ಅರ್ಜಿಯನ್ನು ಮದ್ರಾಸ್ ಹೈಕೋರ್ಟ್ ಶುಕ್ರವಾರ ವಜಾಗೊಳಿಸಿದೆ.

ಆದಾಯ ತೆರಿಗೆ ಕಾಯ್ದೆಯಡಿಯಲ್ಲಿ ನಿಗದಿತ ಮಿತಿಯೊಳಗೆ ದಂಡದ ಆದೇಶವನ್ನು ಹೊರಡಿಸಲಾಗಿದೆ ಎಂದು ತೀರ್ಪು ನೀಡಿದ ನಂತರ ನ್ಯಾಯಮೂರ್ತಿ ಸೆಂಥಿಲ್‌ಕುಮಾರ್ ರಾಮಮೂರ್ತಿ ಅರ್ಜಿಯನ್ನು ತಿರಸ್ಕರಿಸಿದರು. "ಮೇಲೆ ಹೇಳಿದ ಕಾರಣಗಳಿಗಾಗಿ, ಆದಾಯ ತೆರಿಗೆ ಕಾಯ್ದೆಯ ಸೆಕ್ಷನ್ 275 (1) (ಎ) ಅಡಿಯಲ್ಲಿ ಮಿತಿಯ ಅವಧಿಯೊಳಗೆ ದಂಡ ವಿಧಿಸುವ ಆದೇಶವನ್ನು ಹೊರಡಿಸಲಾಗಿದೆ ಎಂದು ನಾನು ತೀರ್ಮಾನಿಸುತ್ತೇನೆ" ಎಂದು ನ್ಯಾಯಾಧೀಶರು ತಮ್ಮ ಆದೇಶದಲ್ಲಿ ತಿಳಿಸಿದ್ದಾರೆ.

ನ್ಯಾಯಾಲಯವು "ಮಧ್ಯಪ್ರವೇಶಿಸಲು ಅರ್ಹವಾದ ಯಾವುದೇ ದೌರ್ಬಲ್ಯವಿಲ್ಲ" ಎಂದು ಹೇಳಿದ ನಂತರ ಅರ್ಜಿಯನ್ನು ವಜಾಗೊಳಿಸಲಾಗಿದೆ. ಆದಾಗಲೂ, ದಂಡದ ವಿರುದ್ಧ ಎತ್ತಿದ ಇತರ ಆಧಾರಗಳನ್ನು ತಾವು ಪರಿಶೀಲಿಸಿಲ್ಲ ಎಂದು ನ್ಯಾಯಾಧೀಶರು ಸ್ಪಷ್ಟಪಡಿಸಿದರು ಮತ್ತು ಮಿತಿಯನ್ನು ಹೊರತುಪಡಿಸಿ ಇತರ ಆಧಾರದ ಮೇಲೆ ಮೇಲ್ಮನವಿ ಪ್ರಾಧಿಕಾರದ ಮುಂದೆ ಆದೇಶವನ್ನು ಪ್ರಶ್ನಿಸಲು ವಿಜಯ್‌ಗೆ ಮುಕ್ತ ಅವಕಾಶವನ್ನು ನೀಡಿದ್ದಾರೆ.

2015 ರಲ್ಲಿ ವಿಜಯ್ ಮತ್ತು ಎಸ್‌ಕೆಟಿ ನಿರ್ಮಾಪಕರ ಆವರಣದಲ್ಲಿ ನಡೆಸಿದ ಶೋಧದ ನಂತರ, ಜೂನ್ 30, 2022 ರಂದು ಆದಾಯ ತೆರಿಗೆ ಇಲಾಖೆಯು ದಂಡ ವಿಧಿಸಿತು. ಶೋಧದ ಸಮಯದಲ್ಲಿ, ಅಧಿಕಾರಿಗಳು ನಿರ್ಮಾಪಕರಿಂದ 16 ಕೋಟಿ ರೂ.ಗಳ ಚೆಕ್ ಪಾವತಿಯ ಜೊತೆಗೆ 4.93 ಕೋಟಿ ರೂ.ಗಳ ನಗದು ರಶೀದಿಯನ್ನು ತೋರಿಸುವ ದಾಖಲೆಗಳನ್ನು ವಶಪಡಿಸಿಕೊಂಡರು, ಆದರೆ ಆ ಚೆಕ್ ಅನ್ನು ಖಾತೆಗಳಲ್ಲಿ ಬಹಿರಂಗಪಡಿಸಲಾಗಿಲ್ಲ.

### ಎಸ್‌ಎಸ್‌ಎಲ್‌ಸಿ ಮಕ್ಕಳ ಭವಿಷ್ಯಕ್ಕಾಗಿ ರೋಣ, ಗಜೇಂದ್ರಗಡ ತಾ.ಪಂ ಮಹತ್ವದ ಹೆಜ್ಜೆ

# ಸಂಜೆ 7ರಿಂದ ರಾತ್ರಿ 9ರವರೆಗೆ ಮೊಬೈಲ್–ಟಿವಿ ಬಂದ್!

■ ವಿಜಯಸಾಕ್ಷಿ ಸುದ್ದಿ, ರೋಣ

ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಸಿದ್ಧಗೊಳ್ಳುತ್ತಿರುವ ವಿದ್ಯಾರ್ಥಿಗಳ ಓದಿನ ಹಿತದೃಷ್ಟಿಯಿಂದ ರೋಣ ಹಾಗೂ ಗಜೇಂದ್ರಗಡ ತಾಲೂಕಿನ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಸಾಯಂಕಾಲ 7 ಗಂಟೆಯಿಂದ ರಾತ್ರಿ 9 ಗಂಟೆಯವರೆಗೆ ಮೊಬೈಲ್ ಹಾಗೂ ಟಿವಿಗಳನ್ನು ಸ್ವಿಚ್ ಆಫ್ ಮಾಡುವಂತೆ ಮತ್ತು ಟ್ರ್ಯಾಕ್ಟರ್‌ಗಳಲ್ಲಿ ಜೋರಾಗಿ ಹಾಡು ಹಾಕಿಕೊಂಡು ಸಂಚರಿಸದಂತೆ ಡಂಗುರ ಸಾರಲು ರೋಣ ತಾಲೂಕು ಪಂಚಾಯಿತಿ ಆದೇಶ ಹೊರಡಿಸಿದೆ.

ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ರೋಣ ಇವರ ಪತ್ರದ ಆಧಾರದ ಮೇಲೆ ಈ ಕ್ರಮ ಕೈಗೊಳ್ಳಲಾಗಿದ್ದು, ಮಕ್ಕಳ ಓದಿಗೆ ಶಾಂತ ವಾತಾವರಣ ಒದಗಿಸಿ ಎಸ್‌ಎಸ್‌ಎಲ್‌ಸಿ ಫಲಿತಾಂಶವನ್ನು ಸುಧಾರಿಸುವುದು ಈ ಕ್ರಮದ ಮುಖ್ಯ ಉದ್ದೇಶವಾಗಿದೆ.

ಈ ಕುರಿತು ರೋಣ ಹಾಗೂ ಗಜೇಂದ್ರಗಡ ತಾಲೂಕಾ ಕಾರ್ಯನಿರ್ವಾಹಕ ಅಧಿಕಾರಿಗಳಾದ ಚಂದ್ರಶೇಖರ ಬಿ.ಕಂದಕೂರ ಅವರು ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದು, ಎಲ್ಲಾ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ತಮ್ಮ ತಮ್ಮ ವ್ಯಾಪ್ತಿಯಲ್ಲಿ ತಕ್ಷಣ ಡಂಗುರ ಸಾರುವಂತೆ ಕ್ರಮ ಕೈಗೊಂಡು, ಅನುಷ್ಠಾನಗೊಳಿಸಿ ವರದಿ ಸಲ್ಲಿಸುವಂತೆ ಸೂಚಿಸಿದ್ದಾರೆ.



ಇವತ್ತಿನ ಮಕ್ಕಳಿಗೆ ಓದಲು ಸಮಯ ಕೊಡುವುದು ತುಂಬಾ ಮುಖ್ಯ. ಸಂಜೆ ಹೊತ್ತಿಗೆ ಟಿವಿ, ಮೊಬೈಲ್, ಜೋರಾದ ಹಾಡುಗಳಿಂದ ಮಕ್ಕಳ ಗಮನ ಬೇರೆಡೆ ಹೋಗುತ್ತಿತ್ತು. ಸರ್ಕಾರ ಹಾಗೂ ತಾಲೂಕು ಪಂಚಾಯತ್ ತೆಗೆದುಕೊಂಡಿರುವ ಈ ನಿರ್ಧಾರ ಬಹಳ ಒಳ್ಳೆಯದು. ನಾವು ಗ್ರಾಮಸ್ಥರು ಎಲ್ಲರೂ ಈ ಕಾರ್ಯಕ್ಕೆ ಸಹಕರಿಸುತ್ತೇವೆ.

–ಶಿವಾನಂದ,
ಗ್ರಾಮಸ್ಥರು.

ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಭವಿಷ್ಯ ನಮ್ಮೆಲ್ಲರ ಜವಾಬ್ದಾರಿ. ಮಕ್ಕಳ ಓದಿಗೆ ಅನುಕೂಲವಾಗುವ ಶಾಂತ ವಾತಾವರಣ ನಿರ್ಮಾಣವೇ ಈ ಕ್ರಮದ ಉದ್ದೇಶ. ಸಾರ್ವಜನಿಕರ ಸಹಕಾರದಿಂದ ಉತ್ತಮ ಫಲಿತಾಂಶ ಸಾಧಿಸಬಹುದು.

– ಚಂದ್ರಶೇಖರ ಬಿ.ಕಂದಕೂರ.
ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು.

ಗ್ರಾಮೀಣ ಪ್ರದೇಶಗಳಲ್ಲಿ ಸಂಜೆ ಸಮಯದಲ್ಲಿ ಮೊಬೈಲ್, ಟಿವಿ ಹಾಗೂ ಜೋರಾದ ಸಂಗೀತದಿಂದ ಮಕ್ಕಳ ಅಧ್ಯಯನಕ್ಕೆ ಅಡ್ಡಿಯಾಗುತ್ತಿದೆ ಎಂಬ ದೂರುಗಳ ಹಿನ್ನೆಲೆ ಈ ನಿರ್ಧಾರಕ್ಕೆ ಬರಲಾಗಿದೆ. ಸಾರ್ವಜನಿಕರು ಸಂಪೂರ್ಣ ಸಹಕಾರ ನೀಡುವಂತೆ ತಾಲೂಕು ಪಂಚಾಯಿತಿ ಮನವಿ ಮಾಡಿದೆ.

### ಉದ್ಯಾನವನ ಜಾಗೆಯನ್ನು ಕಬಳಿಕೆ ಮಾಡುತ್ತಿರುವವರ ವಿರುದ್ಧ ಕ್ರಮ ಕೈಗೊಳ್ಳಲು ಮನವಿ

# ನಗರಸಭೆ ಅಧಿಕಾರಿಗಳಿಂದ ನಕಲಿ ದಾಖಲೆ ಸೃಷ್ಟಿ



■ ವಿಜಯಸಾಕ್ಷಿ ಸುದ್ದಿ, ಗದಗ

ಸ್ಥಳೀಯ ರಾಜೋಟೇಶ್ವರ ನಗರದಲ್ಲಿರುವ ನಗರಸಭೆಯ ಉದ್ಯಾನವನದಲ್ಲಿ ನಕಲಿ ದಾಖಲೆ ಸೃಷ್ಟಿಸಿ ಭೂ ಕಬಳಿಕೆ ಮಾಡುತ್ತಿರುವವರನ್ನು ಹಾಗೂ ಭ್ರಷ್ಟ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಅಲ್ಲಿನ ನಿವಾಸಿಗಳು ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿ ಅಗ್ರಹಿಸಿದರು.

ಈ ಸಂದರ್ಭದಲ್ಲಿ ರಾಜೋಟೇಶ್ವರ ನಗರ ಕ್ಷೇಮಾಭಿವೃದ್ಧಿ ಟ್ರಸ್ಟ್‌ನ ಅಧ್ಯಕ್ಷರಾದ ರವಿ ಗುಂಜೀಕರ ಮಾತನಾಡಿ, ರಾಜೋಟೇಶ್ವರ ನಗರದ ರಿ.ಸ. ನಂ323/4ರ ಪ್ಲಾಟ್ ನಂ. 48ರ ಉದ್ಯಾನವನದಲ್ಲಿ ಅನಾಮಿಕ ವ್ಯಕ್ತಿಗಳಿಂದ ಖೊಟ್ಟಿ ದಾಖಲೆಗಳನ್ನು ಸೃಷ್ಟಿಸಿ ಭೂಕಬಳಿಕೆ ಮಾಡಲು ಪ್ರಯತ್ನ ನಡೆಯುತ್ತಿದೆ. ಈ ಉದ್ಯಾನವನವನ್ನು ಕಬಳಿಸುವ ಉದ್ದೇಶದಿಂದ ಪ್ಲಾಟ್ ನಂ. 48ರ ಉದ್ಯಾನವನ ಜಾಗದಲ್ಲಿ ಹೆಚ್ಚುವರಿಯಾಗಿ ತಾವೇ ಪ್ಲಾಟ್ ನಂ. 49, 50, 51, 52 ಎಂದು ನಾಲ್ಕು ಹೆಚ್ಚುವರಿ ಪ್ಲಾಟ್‌ಗಳನ್ನು ನಿರ್ಮಿಸಿಕೊಂಡಿದ್ದಾರೆ. ಇದಕ್ಕೆ ನಗರಸಭೆ ಅಧಿಕಾರಿಗಳು ಕೈಗೂಡಿ ಹೆಚ್ಚುವರಿ ಆಸ್ತಿಗಳಿಗೆ ಕಾನೂನು ಬಾಹಿರ ಫಾರ್ಮ್ ನಂ. 3ನ್ನು ತಯಾರಿಸಿಕೊಟ್ಟಿರುವ ನಗರಸಭೆ ಅಧಿಕಾರಿಗಳನ್ನು ಸಹ ಅಮಾನತು ಮಾಡಬೇಕೆಂದು ಆಗ್ರಹಿಸಿದರು.

ಮನವಿಗೆ ಸ್ಪಂದಿಸಿದ ಜಿಲ್ಲಾಧಿಕಾರಿಗಳು, ಒಂದು ವಾರದೊಳಗೆ ನಗರಸಭೆ ಅಧಿಕಾರಿಗಳೊಂದಿಗೆ ಚರ್ಚಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವದಾಗಿ ಭರವಸೆ ನೀಡಿದರು.

ಈ ಹಿಂದೆ ಲೇಔಟ್‌ನ ಮೂಲ ಮಾಲಕರಾದ ನಿಲೂಗಲ್ ಎಂಬುವರು ಚಪ್ಪರಮಠ ಎಂಬುವರಿಗೆ ಎನ್.ಎ ಕೆಜೆಪಿ ಮಾಡಲು ನೀಡಿದ್ದರು. ನಂತರ ಪವರ್ ಆಫ್ ಅಟಾರ್ನಿ ಮೂಲಕ ಬಿಜಾಪೂರ ಎಂಬುವರು 48 ಪ್ಲಾಟ್‌ಗಳ ಲೇಔಟ್‌ನ್ನು ನಿರ್ಮಾಣ ಮಾಡಿ 1985ರಲ್ಲಿ ಮಾರಾಟ ಮಾಡಿದ್ದರು. 2024ರಲ್ಲಿ ಕೆಲವು ಅನಾಮಿಕ ವ್ಯಕ್ತಿಗಳು ಪ್ಲಾಟ್ ನಂ. 48 ಉದ್ಯಾನವನದಲ್ಲಿ 49, 50, 51, 52 ಹೆಚ್ಚುವರಿ ಪ್ಲಾಟ್‌ಗಳ ನಕಲಿ ದಾಖಲೆಗಳನ್ನು ಸೃಷ್ಟಿಸಿ ಫಾರ್ಮ್ ನಂ. 3ರನ್ನು ಪಡೆದಿದ್ದಾರೆ. ಆದರೆ, ನಗರಸಭೆ ಅಧಿಕಾರಿಗಳು ಸ್ಥಳ ಪರಿಶೀಲನೆ ಮಾಡದೆ, ಚೌಕಾಸಿ ಮಾಡದೆ ಫಾರ್ಮ್ ನಂ. 3ರನ್ನು ಭ್ರಷ್ಟಾಚಾರ ನಡೆಸಿದ್ದಾರೆ. ಈ ಬಗ್ಗೆ ಜಿಲ್ಲಾಧಿಕಾರಿಗಳು ಸೂಕ್ತ ಕ್ರಮ ವಹಿಸಿ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಂಡು ಉದ್ಯಾನವನ್ನು ಮೂಲಭೂತ ಸೌಕರ್ಯಗಳೊಂದಿಗೆ ಅಭಿವೃದ್ಧಿಪಡಿಸಬೇಕೆಂದು ರವಿ ಗುಂಜೀಕರ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಎಸ್. ಆರ್. ಹಿರೇಮಠ, ಎಸ್.ಪಿ. ಪಾವನ, ಅಂಬರೀಶ ಇಟಗಿ, ಶರಣು ಬೋಳನವರ, ಬಸವರಾಜ ಹಡಪದ, ರಾಜು ಖಾನಪ್ಪನವರ, ಕುಮಾರ ಮಾರನಬಸರಿ, ಮಲ್ಲಪ್ಪ ಕತ್ತಿ, ಮಂಜುನಾಥ ಮಾನೆ, ಚೇತನ ಬಳ್ಳಾರಿ, ಆನಂದ ಶೇಟ್, ಬಿ.ಎಸ್. ಕುಂಬಾರಗೇರಿಮಠ, ಈಶ್ವರ ಹಿರೇಮಠ, ಚನ್ನಯ್ಯ ಹಿರೇಮಠ, ಮನೋಜ ಪಾವನ, ಗಿಡ್ಡಹನುಮಣ್ಣವರ, ಎನ್.ಎನ್. ಹಿರೇಮಠ, ಗಂಗಾಧರ ಮೇಲಗಿರಿ ಮುಂತಾದವರು ಉಪಸ್ಥಿತರಿದ್ದರು.

## ವಿದ್ಯಾರ್ಥಿಗಳಿಂದ ಘನ ತ್ಯಾಜ್ಯ ವಸ್ತು ನಿರ್ವಹಣಾ ಘಟಕ ವೀಕ್ಷಣೆ




■ ವಿಜಯಸಾಕ್ಷಿ ಸುದ್ದಿ, ಕೊಟ್ಟೂರು

ತಾಲೂಕಿನ ತಿಮ್ಮಲಾಪುರ ಗ್ರಾಮದ ಸರ್ಕಾರಿ ಪ್ರೌಢ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು, ಕೊಟ್ಟೂರು ಪಟ್ಟಣದ ಘನ ತ್ಯಾಜ್ಯ ವಸ್ತು ನಿರ್ವಹಣಾ ಘಟಕದ ನಿರ್ವಹಣೆಯ ಕುರಿತು ವೀಕ್ಷಣಾ ಕಾರ್ಯಕ್ರಮವನ್ನು ಶುಕ್ರವಾರ ಆಯೋಜಿಸಿದ್ದರು.

ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಪಟ್ಟಣ ಪಂಚಾಯಿತಿ ಸಿಬ್ಬಂದಿಗಳು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಎ. ನಸರುಲ್ಲಾ ಅವರು, ಕೊಟ್ಟೂರು ಪಟ್ಟಣ ವ್ಯಾಪ್ತಿಯಲ್ಲಿ ಸಂಗ್ರಹವಾಗುವ ಕಸವನ್ನು ಎಸ್.ಡಬ್ಲ್ಯೂ.ಎಂ ಘಟಕದಲ್ಲಿ ಹಸಿ ಕಸ, ಒಣ ಕಸ ಹಾಗೂ ಅಪಾಯಕಾರಿ ಕಸವಾಗಿ ವಿಂಗಡಣೆ ಮಾಡಲಾಗುತ್ತಿದೆ ಎಂದರು.

ಹಸಿ ಕಸದಿಂದ ಎರೆಹುಳು ಗೊಬ್ಬರ ತಯಾರಿಸಲಾಗುತ್ತಿದ್ದು, ಮನೆ ಮನೆಗಳಲ್ಲಿ ಸಂಗ್ರಹವಾಗುವ ಕಸವನ್ನು ಮೂಲದಲ್ಲಿಯೇ ವಿಂಗಡಿಸಿ ತ್ಯಾಜ್ಯ ವಿಲೇವಾರಿ ವಾಹನಗಳಿಗೆ ನೀಡುವಂತೆ ಸಾರ್ವಜನಿಕರಿಗೆ ತಿಳಿಸಿದರು.

ಇದೇ ವೇಳೆ ಸರ್ಕಾರದ ಆದೇಶಗಳು, ಎನ್.ಜಿ.ಟಿ ನಿಯಮಾವಳಿ, ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯ ನಿರ್ದೇಶನಗಳು ಹಾಗೂ ಕಸದಿಂದ ಆರೋಗ್ಯದ ಮೇಲೆ ಉಂಟಾಗುವ ದುಷ್ಪರಿಣಾಮಗಳ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು. ವಿದ್ಯಾರ್ಥಿಗಳು ತಮ್ಮ ಮನೆಗಳಲ್ಲಿ, ಗ್ರಾಮ ಹಾಗೂ ಪಟ್ಟಣಗಳಲ್ಲಿ ಸಾರ್ವಜನಿಕರಲ್ಲಿ ಕಸ ವಿಂಗಡಣೆ ಕುರಿತು ಅರಿವು ಮೂಡಿಸಬೇಕೆಂದು ಕರೆ ನೀಡಿದರು.

ಘನ ತ್ಯಾಜ್ಯ ವಿಲೇವಾರಿ ಘಟಕವನ್ನು ವೀಕ್ಷಿಸಿ ಮಾಹಿತಿ ಪಡೆದ ಬಳಿಕ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಮುಖ್ಯಾಧಿಕಾರಿಗಳಿಗೆ ಮತ್ತು ಪಟ್ಟಣ ಪಂಚಾಯಿತಿ ಪೌರಕಾರ್ಮಿಕರಿಗೆ ಧನ್ಯವಾದಗಳನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ಕಿರಿಯ ಆರೋಗ್ಯ ನಿರೀಕ್ಷಕರಾದ ಹೆಚ್.ಕೆ. ಗೀತಾ, ಪರುಸಪ್ಪ, ಹೇಮನಗೌಡ, ಮೈಲಾರಿ ಸೇರಿದಂತೆ ಸಿಬ್ಬಂದಿ ವರ್ಗ ಹಾಗೂ ಶಾಲೆಯ ಮುಖ್ಯಗುರುಗಳಾದ ಬಿ. ಸಣ್ಣಲಿಂಗನಗೌಡ, ಸಹ ಶಿಕ್ಷಕರಾದ ಎ. ಮಹೇಂದ್ರ, ಸಂತೋಷ, ಸವಿತಾ, ಕವಿತಾ ಮತ್ತು ಸುಮಾ ಉಪಸ್ಥಿತರಿದ್ದರು.

## ಕೋಗಳಿ ಗ್ರಾಮದಲ್ಲಿ ಕರ್ನಾಟಕ ಪಬ್ಲಿಕ್ ಶಾಲೆ ಉದ್ಘಾಟನೆ



■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಕೋಗಳಿ ಗ್ರಾಮದಲ್ಲಿ ನೂತನವಾಗಿ ಸ್ಥಾಪಿತಗೊಂಡ ಕರ್ನಾಟಕ ಪಬ್ಲಿಕ್ ಶಾಲೆಯ ಉದ್ಘಾಟನೆ ಹಾಗೂ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಕಾರ್ಯಕ್ರಮವನ್ನು ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಕೆ. ನೇಮಿರಾಜ ನಾಯ್ಕ ಅವರು ಉದ್ಘಾಟಿಸಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಮಾನ್ಯ ಶಾಸಕರು, ಇಂದಿನ ದಿನಗಳಲ್ಲಿ ಭಾರತ ವಿಜ್ಞಾನ ಕ್ಷೇತ್ರದಲ್ಲಿ ವೇಗವಾಗಿ ಮುನ್ನಡೆಯುತ್ತಿದ್ದು, ಜಗತ್ತಿನಾದ್ಯಂತ ವಿಜ್ಞಾನ ಕ್ಷೇತ್ರದಲ್ಲಿ ತನ್ನದೇ ಆದ ಸ್ಥಾನ ಪಡೆದುಕೊಳ್ಳುತ್ತಿದೆ. ಮುಂದಿನ ದಿನಗಳಲ್ಲಿ ನಮ್ಮ ಹಳ್ಳಿಗಳ ಸರ್ಕಾರಿ ಶಾಲೆಗಳಲ್ಲಿ ಓದುವ ಮಕ್ಕಳು ಸಹ ವಿಜ್ಞಾನಿಗಳಾಗಿ ದೇಶಕ್ಕೆ ಹೆಮ್ಮೆ ತರುವಂತಾಗಬೇಕು ಎಂದು ಆಶಯ ವ್ಯಕ್ತಪಡಿಸಿದರು.

ಗ್ರಾಮೀಣ ಪ್ರದೇಶದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರಕಬೇಕು ಎಂಬ ಉದ್ದೇಶದಿಂದ ಕರ್ನಾಟಕ ಪಬ್ಲಿಕ್ ಶಾಲೆಗಳ ಸ್ಥಾಪನೆ ಮಹತ್ವದ್ದಾಗಿದ್ದು, ವಿದ್ಯಾರ್ಥಿಗಳು ವಿಜ್ಞಾನ ಮನೋಭಾವ ಬೆಳೆಸಿಕೊಳ್ಳುವಂತೆ ಶಿಕ್ಷಕರು ಮಾರ್ಗದರ್ಶನ ನೀಡಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪುರಸಭೆ ಸದಸ್ಯ ಬಿ. ಗಂಗಣ್ಣ, ಮುಖಂಡರಾದ ಜಿ.ಎಂ. ಜಗದೀಶ್, ಎಸ್.ಡಿ.ಎಂ.ಸಿ ಅಧ್ಯಕ್ಷರು, ಸ್ಥಳೀಯ ಚುನಾಯಿತ ಪ್ರತಿನಿಧಿಗಳು, ಶಾಲೆಯ ಮುಖ್ಯಗುರುಗಳು, ಶಿಕ್ಷಕ ಹಾಗೂ ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಮಿಶ್ರ ತಳಿ ಹಸುಗಳ ಅಧಿಕ ಹಾಲು ಇಳುವರಿ ಸ್ಪರ್ಧೆ, ಜಾನುರುವಾರುಗಳ ಪ್ರದರ್ಶನ

# ರೈತರ ಆರ್ಥಿಕ ಅಭಿವೃದ್ಧಿಗೆ ಹಸುಗಳು ಸಹಕಾರಿ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ರೈತರು ಆರ್ಥಿಕವಾಗಿ ಸದೃಢರಾಗಲು ಹಸುಗಳು ಹಾಗೂ ಎತ್ತುಗಳ ಸಾಕಾಣಿಕೆ ಸಹಕಾರಿ ಎಂದು ಕಪ್ಪತ್ತಗುಡ್ಡ ನಂದಿವೇರಿಮಠದ ಶಿವಕುಮಾರ ಸ್ವಾಮೀಜಿ ಹೇಳಿದರು.

ಅವರು ಪಟ್ಟಣ ಸಮಿಪದ ಕಣವಿ ಗ್ರಾಮದಲ್ಲಿ ಜಿಲ್ಲಾ ಪಂಚಾಯಿತಿ ಗದಗ, ಪಶುಪಾಲನಾ ಮತ್ತು ವೈದ್ಯಕೀಯ ಸೇವಾ ಇಲಾಖೆ ಗದಗ, ಧಾರವಾಡ ಹಾಗೂ ಗದಗ, ಕಣವಿ ಸಹಕಾರಿ ಹಾಲು ಉತ್ಪಾದಕರ ಸಂಘ ಹಾಗೂ ಪ್ರಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ವತಿಯಿಂದ ತಾಲೂಕು ಮಟ್ಟದ ಮಿಶ್ರ ತಳಿ ಹಸುಗಳ ಅಧಿಕ ಹಾಲು ಇಳುವರಿ ಸ್ಪರ್ಧೆ, ಜಾನುರುವಾರುಗಳ ಪ್ರದರ್ಶನ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿಕೊಂಡು ಮಾತನಾಡಿದರು.

ಹಸುಗಳ ಸಾಕಾಣಿಕೆಯಿಂದ ಇಳಿಕೆಯಿಂದ ರೈತರು ಆರ್ಥಿಕವಾಗಿ ಸಂಕಷ್ಟದಲ್ಲಿದ್ದು, ನಮ್ಮ ಪೂರ್ವಜರು ಪ್ರತಿಯೊಂದು ಕುಟುಂಬದಲ್ಲಿ ಹಸು ಹಾಗೂ ಎತ್ತುಗಳ ಸಾಕಾಣಿಕೆಯಿಂದ ಆರ್ಥಿಕವಾಗಿ ಅಭಿವೃದ್ಧಿಯ ಜೊತೆಯಲ್ಲಿ, ಉತ್ತಮ ಆರೋಗ್ಯವಂತ ಬದುಕು ಬದುಕುತ್ತಿದ್ದರು. ಈಗ ಹಳ್ಳಿಗಳಲ್ಲಿ ಹಸುಗಳ ಇಳಿಕೆಯಿಂದ ಹಳ್ಳಿಗಳು ಅನಾಥಾಶ್ರಮಗಳಾಗಿ ಪರಿಣಮಿಸುತ್ತಿದ್ದು, ಹಸುಗಳು ಸಾಕಾಣಿಕೆಯಿಂದ ಭೂಮಿ ಫಲವತ್ತತೆ ಹೊಂದಲು ಸಾಧ್ಯ. ಇದರಿಂದ ಉತ್ತಮ ಇಳುವರಿ ಪಡೆದುಕೊಳ್ಳಲು ಸಾಧ್ಯವಾಗುತ್ತದೆ ಎಂದರು.



ಕಾರ್ಯಕ್ರಮ ಉದ್ಘಾಟಿಸಿದ ಮಾಜಿ ಶಾಸಕ ಡಿ.ಆರ್. ಪಾಟೀಲ್ ಮಾತನಾಡಿ, ಹಿಂದಿನ ಕಾಲದ ರೈತರ ಜೀವನ ಶೈಲಿ ಮರಕಳಿಸಬೇಕಾದರೆ ಪ್ರತಿಯೊಬ್ಬರೂ ಹಸುಗಳನ್ನು ಸಾಕಾಣಿಕೆ ಮಾಡಬೇಕು. ಇದರಿಂದ ಆರ್ಥಿಕವಾಗಿ ಅಭಿವೃದ್ಧಿಗೆ ಸಹಕಾರಿಯಾಗುವುದು ಎಂದರು.

ಕೆ.ಸಿ.ಸಿ ಬ್ಯಾಂಕ್ ನಿರ್ದೇಶಕ ಸಿ.ಬಿ. ದೊಡ್ಡಗೌಡ್ರ ಮಾತನಾಡಿ, ಕೆ.ಸಿ.ಸಿ ಬ್ಯಾಂಕ್ ಸಹಯೋಗದಲ್ಲಿ ಜಾನುವಾರುಗಳ ಸಾಕಾಣಿಕೆಗೆ ಸಾಕಷ್ಟು ಸಹಾಯವನ್ನು ನೀಡಲಾಗುತ್ತಿದ್ದು, ಅದರ ಸದುಪಯೋಗ ಪಡೆದುಕೊಂಡು ಆರ್ಥಿಕವಾಗಿ ಅಭಿವೃದ್ಧಿ ಹೊಂದಬೇಕು ಎಂದರು.

ಕಣವಿ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಎಸ್.ಎಸ್. ಪಾಟೀಲ ಮಾತನಾಡಿ, ನಶಿಸುತ್ತಿರುವ ಕೃಷಿ ಚಟುವಟಿಕೆಗಳ ಮೂಲಕ ಕಾರಣ ಜಾನುವಾರುಗಳ ಕೊರತೆಯಿಂದ, ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕುತ್ತಿದ್ದು, ಪ್ರತಿಯೊಬ್ಬರು ಕೃಷಿಯೊಂದಿಗೆ ಜಾನುವಾರು ಸಾಕಾಣಿಕೆಯಿಂದ ಆರ್ಥಿಕವಾಗಿ ಅಭಿವೃದ್ಧಿ ಹೊಂದಲು ಸಾಧ್ಯವಿದೆ ಎಂದರು.

ಅಧ್ಯಕ್ಷತೆಯನ್ನು ಪರಪ್ಪ ಕೋಳಿವಾಡ, ಶಿವಕುಮಾರಗೌಡ ಪಾಟೀಲ, ಲಿಂಗರಾಜ ಪಾಟೀಲ, ಪ್ರಕಾಶ ಉಳವಿ, ಮಾಹಾದೇವಪ್ಪ ಬಟ್ಟೂರ, ಸವಿತಾ ಸೋಮಣ್ಣವರ, ಎಸ್.ವೈ. ಕೋರಿ, ಡಾ. ಎಚ್.ಬಿ. ಹುಲಗಣ್ಣವರ, ಲಿಂಗಯ್ಯ ಗೌರಿ, ಎಸ್.ಎಸ್. ಹೊಸಮಠ, ಎಂ.ಜಿ. ಮೇಟಿ, ಡಾ. ಎಚ್.ವಾಯ್. ಹೊನ್ನಿನಾಯ್ಕರ್, ಪ್ರಸನ್ನ ಪಟ್ಟೆದ, ಇಮಾಮಸಾಬ ಕಿಲ್ಲೇದಾರ, ಮಲ್ಲಪ್ಪ ಬಂದಕನವರ, ಸಿದ್ದಪ್ಪ ಜೊಂಡಿ, ಬಾಪುಸಾಬ ಕಿಲ್ಲೇದಾರ ಇದ್ದರು.

## 2025ರ ಬಿಹಾರ ವಿಧಾನಸಭಾ ಚುನಾವಣೆ ಪ್ರಶ್ನಿಸಿ ಜನ ಸುರಾಜ್ ಪಕ್ಷದಿಂದ ಅರ್ಜಿ: ವಿಚಾರಣೆ ನಿರಾಕರಿಸಿದ ಸುಪ್ರೀಂ ಕೋರ್ಟ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

2025 ರ ಬಿಹಾರ ವಿಧಾನಸಭಾ ಚುನಾವಣೆಯ ನಡವಳಿಕೆ ಮತ್ತು ಫಲಿತಾಂಶವನ್ನು ಪ್ರಶ್ನಿಸಿ ಪ್ರಶಾಂತ್ ಕಿಶೋರ್ ನೇತೃತ್ವದ ಜನ್ ಸುರಾಜ್ ಪಕ್ಷ ಸಲ್ಲಿಸಿದ್ದ ಅರ್ಜಿಯನ್ನು ವಿಚಾರಣೆಗೆ ತೆಗೆದುಕೊಳ್ಳಲು ಸುಪ್ರೀಂ ಕೋರ್ಟ್ ಶುಕ್ರವಾರ ನಿರಾಕರಿಸಿದೆ. ರಾಜಕೀಯ ಪಕ್ಷದ ಆಜ್ಞೆಯ ಮೇರೆಗೆ ಸಂಪೂರ್ಣ ಚುನಾವಣಾ ಪ್ರಕ್ರಿಯೆಯನ್ನು ಬದಿಗಿಡಲು ಸರ್ವವ್ಯಾಪಿ ನಿರ್ದೇಶನವನ್ನು ನೀಡಲು ಸಾಧ್ಯವಿಲ್ಲ ಎಂದು ಹೇಳಿದೆ.

ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿ ಜೋಯ್ಮಲ್ಯ ಬಾಗ್ಚಿ ಅವರನ್ನೊಳಗೊಂಡ ಪೀಠವು, ಪಕ್ಷವು ತನ್ನ ದೂರುಗಳೊಂದಿಗೆ ಪಾಟ್ನಾ ಹೈಕೋರ್ಟ್ ಅನ್ನು ಸಂಪರ್ಕಿಸುವಂತೆ ನಿರ್ದೇಶಿಸಿದೆ. ಅಂತಹ ಸವಾಲಿಗೆ ಸುಪ್ರೀಂ ಕೋರ್ಟ್ ಮೊದಲ ನಿದರ್ಶನದ ವೇದಿಕೆಯಾಗಬಾರದು ಎಂದು ಒತ್ತಿಹೇಳಿದೆ.

ಒಂದು ರಾಜಕೀಯ ಪಕ್ಷದ ಫಲಿತಾಂಶದ ಬಗ್ಗೆ ಅತೃಪ್ತಿ ಇದೆ ಎಂಬ ಕಾರಣಕ್ಕೆ ಇಡೀ ಚುನಾವಣಾ ಫಲಿತಾಂಶವನ್ನು ಬದಿಗಿಡಲು ಸಾಧ್ಯವಿಲ್ಲ ಎಂದು ಪೀಠ ಅಭಿಪ್ರಾಯಪಟ್ಟಿದೆ.

ನವೆಂಬರ್ 2025 ರ ಚುನಾವಣೆಯಲ್ಲಿ 238 ಸ್ಥಾನಗಳಲ್ಲಿ ಸ್ಪರ್ಧಿಸಿ ಖಾತೆ ತೆರೆಯಲು ವಿಫಲವಾದ ಕಾರಣ, ಹೆಚ್ಚಿನ ಅಭ್ಯರ್ಥಿಗಳು ಠೇವಣಿ ಕಳೆದುಕೊಂಡ ಕಾರಣ, ಜನ ಸುರಾಜ್ ಪಕ್ಷವು ನಿರಾಶಾದಾಯಕ ಪ್ರದರ್ಶನದ ನಂತರ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿತ್ತು.

ಚುನಾವಣಾ ವೇಳಾಪಟ್ಟಿ ಘೋಷಣೆಯಾದ ನಂತರ, ಮುಖ್ಯಮಂತ್ರಿ ಮಹಿಳಾ ರೋಜ್‌ಗಾರ್ ಯೋಜನೆಯಡಿ ಮಹಿಳಾ ಫಲಾನುಭವಿಗಳಿಗೆ ತಲಾ 10,000 ರೂ.ಗಳನ್ನು ವರ್ಗಾಯಿಸುವ ಮೂಲಕ ಬಿಹಾರ ಸರ್ಕಾರವು ಮಾದರಿ ನೀತಿ ಸಂಹಿತೆಯನ್ನು ಉಲ್ಲಂಘಿಸಿದೆ ಎಂದು ಪಕ್ಷವು ತನ್ನ ಅರ್ಜಿಯಲ್ಲಿ ಆರೋಪಿಸಿದೆ.

### ಪತ್ರಿಕಾಗೋಷ್ಠಿಯಲ್ಲಿ ಭಾರತೀಯ ವಿದ್ಯಾಭವನದ ಜಂಟಿ ನಿರ್ದೇಶಕಿ ನಾಗಲಕ್ಷ್ಮೀ ಕೆ.ರಾವ್ ಮಾಹಿತಿ

# ಫೆ. 20ರಿಂದ 22ರವರೆಗೆ ಪುಲಿಗೆರೆ ಉತ್ಸವ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನವು ಡಾ. ಸುಧಾಮೂರ್ತಿಯವರಿಂದ ಜೀರ್ಣೋದ್ಧಾರಗೊಂಡ ನಂತರ ಇನ್ಫೋಸಿಸ್ ಪ್ರತಿಷ್ಠಾನ ಹಾಗೂ ಭಾರತೀಯ ವಿದ್ಯಾಭವನದ ಆಶ್ರಯದಲ್ಲಿ ಕಳೆದ 8 ವರ್ಷಗಳಿಂದ ಪುಲಿಗೆರೆ ಉತ್ಸವವನ್ನು ಯಶಸ್ವಿಯಾಗಿ ನಡೆಸುತ್ತಾ ಬರಲಾಗಿದ್ದು, ಈ ವರ್ಷ ಫೆ. 20, 21, ಮತ್ತು 22ರಂದು 9ನೇ ವರ್ಷದ ಪುಲಿಗೆರೆ ಉತ್ಸವ ನಡೆಯಲಿದೆ ಎಂದು ಭಾರತೀಯ ವಿದ್ಯಾಭವನದ ಜಂಟಿ ನಿರ್ದೇಶಕಿ ನಾಗಲಕ್ಷ್ಮೀ ಕೆ.ರಾವ್ ಹೇಳಿದರು.

ಅವರು ಶುಕ್ರವಾರ ಪಟ್ಟಣದ ಸೋಮೇಶ್ವರ ದೇವಸ್ಥಾನದಲ್ಲಿ ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಮತ್ತು ಹಿರಿಯರ ಸಮ್ಮುಖದಲ್ಲಿ ನಡೆದ ಪ್ರತಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿ ಮಾತನಾಡಿದರು.

ದೇವಸ್ಥಾನದಲ್ಲಿ ಸಂಗೀತ, ನೃತ್ಯ, ಇತಿಹಾಸ ಹೀಗೆ ಸಾಂಸ್ಕೃತಿಕ ಪರಂಪರೆ ಮುಂದುವರೆಯಬೇಕು ಎಂಬ ಉದ್ದೇಶದಿಂದ ಡಾ. ಸುಧಾಮೂರ್ತಿಯವರು ತಮ್ಮ ಪ್ರತಿಷ್ಠಾನದಿಂದ ಪ್ರತಿ ವರ್ಷ 3 ದಿನಗಳ ಕಾಲ ಪುಲಿಗೆರೆ ಉತ್ಸವ ಕಾರ್ಯಕ್ರಮ ನಡೆಸುತ್ತಿದ್ದಾರೆ. ಫೆ. 20ರಂದು ಬೆಳಿಗ್ಗೆ 6ಕ್ಕೆ ಉದಯರಾಗ ಕಾರ್ಯಕ್ರಮವನ್ನು ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಗುರುರಾಜ ಪಾಟೀಲ ಕುಲಕರ್ಣಿ, ಹಾಗೂ ಭಾರತೀಯ ವಿದ್ಯಾಭವನದ ಜಂಟಿ ನಿರ್ದೇಶಕಿ ನಾಗಲಕ್ಷ್ಮೀ ಕೆ.ರಾವ್ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಸಂಜೆ ಕಾರ್ಯಕ್ರಮಕ್ಕೆ ಅತಿಥಿಗಳಾಗಿ ಇನ್ಫೋಸಿಸ್ ಪ್ರತಿಷ್ಠಾನದ ಸಿ.ಎಸ್. ಆರ್ ವಿಭಾಗದ ವ್ಯವಸ್ಥಾಪಕ ಪ್ರಶಾಂತ ಹೆಗಡೆ ಭಾಗವಹಿಸುವರು. ಫೆ. 21ರ ಬೆಳಿಗ್ಗೆ 9.30ಕ್ಕೆ ಜಾನಪದ ಮೇಳಗಳೊಂದಿಗೆ ಸೋಮೇಶ್ವರ ದೇವರ ಪಲ್ಲಕ್ಕಿ ಉತ್ಸವ ಜರುಗಲಿದೆ. ಈ ಕಾರ್ಯಕ್ರಮಗಳಿಗೆ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ, ಲಕ್ಷ್ಮೇಶ್ವರದ ಜನತೆ ಹಾಗೂ ಪುರಸಭೆ, ಸಹಕಾರ ನೀಡುತ್ತಾ ಬಂದಿದ್ದಾರೆ ಎಂದು ಹೇಳಿದರು.

> ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಗುರುರಾಜ ಪಾಟೀಲ ಕುಲಕರ್ಣಿ ಮಾತನಾಡಿ, ಊರಿನ ಎಲ್ಲರ ಸಹಕಾರದಿಂದ ಪುಲಿಗೆರೆ ಉತ್ಸವ ಯಶಸ್ವಿಯಾಗಿ ಸಾಗುತ್ತಾ ಬಂದಿದ್ದು, 9ನೇ ವರ್ಷದ ಕಾರ್ಯಕ್ರಮವನ್ನು ಸಹ ವ್ಯವಸ್ಥಿತವಾಗಿ ಎಲ್ಲರೂ ಸೇರಿ ನೆರವೇರಿಸುತ್ತೇವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಚಂಬಣ್ಣ ಬಾಳಿಕಾಯಿ, ಕುಬೇರಪ್ಪ ಮಹಾಂತಶೆಟ್ಟರ, ಸುರೇಶ ರಾಚನಾಯಕ, ಚನ್ನಪ್ಪ ಜಗಲಿ, ಸಿದ್ದನಗೌಡ ಬಳ್ಳೊಳ್ಳಿ, ಎಂ.ಕೆ. ಕಳ್ಳಿಮಠ, ಶಿವಯೋಗಿ ಅಂಕಲಕೋಟಿ, ಎಸ್.ಪಿ. ಪಾಟೀಲ, ನಾಗರಾಜ ಕಳಸಾಪುರ, ಸೋಮಶೇಖರ ಕೆರಿಮನಿ, ಪ್ರವೀಣ ಬಾಳಿಕಾಯಿ, ಬಸವರಾಜ ಬೆಂಡಿಗೇರಿ, ನೀಲಪ್ಪ ಕರ್ಜಕಣ್ಣವರ, ಬಸವರಾಜ ಬಾಳೇಶ್ವರಮಠ, ಜಿ.ಎಸ್. ಗುಡಗೇರಿ, ಬಸಣ್ಣ ಪುಟಾಣಿ, ಬಸವರಾಜ ಮೆಣಸಿನಕಾಯಿ, ಎನ್.ಸಿ. ಪಾಟೀಲ್, ಪ್ರಕಾಶ ಕೊಂಚಿಗೇರಿಮಠ, ಈರಣ್ಣ ಆದಿ, ಪ್ರಕಾಶ ಮುಳುಗುಂದ, ಸಮೀರ ಪೂಜಾರ, ಶೈಲಾ ಆದಿ, ಮಾಲಾ ದಂದರಗಿ, ಸುಮಾ ಚೋಟಗಲ್, ಸುಲೋಚನಾ ಜವಾಯಿ, ಸುಜಾತಾ ಬಾಳಕಾಯಿ, ಪಾರ್ವತಿ ಕಳ್ಳಿಮಠ, ಐ.ಬಿ. ಜಕ್ಕನಗೌಡ್ರ ಮುಂತಾದವರಿದ್ದರು.

## ಮಕ್ಕಳ ಮನ ಮುದಗೊಳಿಸಿದ ಪಾಲಕರ ಆಟೋಟ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ಪಂಚಾಚಾರ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಶ್ರೀ ರೇಣುಕಾಚಾರ್ಯ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ತಾವು ಆಡುವಂತೆ ತಮ್ಮ ಪಾಲಕರೂ ವಿವಿಧ ಆಟೋಟಗಳಲ್ಲಿ ಪಾಲ್ಗೊಂಡಿರುವುದನ್ನು ಕಂಡು ಮಕ್ಕಳು ಖುಷಿಯಿಂದ ಚಪ್ಪಾಳೆ ತಟ್ಟಿ ಸಂತಸಪಟ್ಟರು.

ಶಾಲೆಯಲ್ಲಿ ಶುಕ್ರವಾರ ಏರ್ಪಡಿಸಿದ್ದ ಪಾಲಕರ ದಿನಾಚರಣೆಯನ್ನು ವೈಶಿಷ್ಟ್ಯಮಯವಾಗಿ ಆಚರಿಸಿದ ಶಾಲಾ ಬಳಗ ಮಕ್ಕಳೆದುರಿಗೆ ವೈವಿಧ್ಯಮಯ ಆಟೋಟಗಳನ್ನು ಪಾಲಕರಿಂದ ಆಡಿಸುವ ಮೂಲಕ ಚಿಣ್ಣರ ಮನ ಮುದಗೊಳ್ಳಲು ಕಾರಣರಾದರು.

ಮಹಿಳಾ ಪಾಲಕರಿಗೆ ಕಣ್ಣಿಗೆ ಬಟ್ಟೆ ಕಟ್ಟಿಕೊಂಡು ಸಸಿಗೆ ನೀರು ಹಾಕುವದು, ಮ್ಯುಸಿಕಲ್ ಚೇರ್, ಪುರುಷರಿಗಾಗಿ ಓಟ, ಬಾಟಲ್ ಜೋಡಣೆ, ಹಣೆಯ ಮೇಲಿನ ಬಿಸ್ಕತ್‌ನ್ನು ಕೈ ತಾಗಿಸದೆ ಬಾಯಿಗೆ ಬೀಳಿಸುವದು ಸೇರಿದಂತೆ ವಿವಿಧ ಆಟಗಳನ್ನು ಆಡಿಸಲಾಯಿತು.

ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದ ಶಿಕ್ಷಕ ವಿ.ಎ. ಕುಂಬಾರ, ಪಾಲಕರು ದೈಹಿಕ, ಮಾನಸಿಕ ವೃದ್ಧಿಗಾಗಿ ಯಾವುದಾದರೊಂದು ಕಾರ್ಯಚಟುವಟಿಕೆಯಲ್ಲಿ ತೊಡಗಬೇಕು. ಈ ಮೂಲಕ ಅವರು ಸುಂದರ ಬದುಕು ಸಾಗಿಸುವಂತಾಗಬೇಕು ಎಂದರು.

ತಮ್ಮ ಮಕ್ಕಳ ಆಟ-ಪಾಠವನ್ನು ನೋಡಿ ಸಂತಸಪಡುವ ಪಾಲಕರೇ ಸ್ವತಃ ವಿವಿಧ ಕ್ರೀಡೆಗಳಲ್ಲಿ ಪಾಲ್ಗೊಂಡಿರುವದು ಸಂತಸದ ಸಂಗತಿ. ಅದರಲ್ಲೂ ತಾಯಂದಿರು ಕ್ರೀಡೆಯಲ್ಲಿ ಪಾಲ್ಗೊಂಡಿರುವುದು ಸಂತಸವನ್ನು ಇನ್ನಷ್ಟು ಹೆಚ್ಚಿಸಿದೆ ಎಂದರು.

ಸಂಸ್ಥೆಯ ಕಾರ್ಯದರ್ಶಿ ಈಶ್ವರ ಬೆಟಗೇರಿ ಮಾತನಾಡಿ, ಪಾಲಕರಿಗಾಗಿ ನಡೆಯುತ್ತಿರುವ ಈ ಕ್ರೀಡಾಕೂಟದಲ್ಲಿ ಶಾಲೆಯಲ್ಲಿ ಓದುತ್ತಿರುವ ವಿದ್ಯಾರ್ಥಿಯ ತಂದೆ-ತಾಯಿ, ಕುಟುಂಬದವರು ಭಾಗವಹಿಸುವುದರಿಂದ ಸಂಬಂಧಗಳು ಗಟ್ಟಿಯಾಗುತ್ತವೆ ಮತ್ತು ಪಾಲಕರು ಒಬ್ಬರನ್ನೊಬ್ಬರು ಅರಿತುಕೊಳ್ಳಲು ಸಹಕಾರಿಯಾಗಿದೆ ಎಂದರು.

ದೈಹಿಕ ಶಿಕ್ಷಕ ರಫೀಕ ರೇವಡಿಗಾರ ಹಾಗೂ ವಿ.ಬಿ. ಬಿಂಗಿ ಪಾಲಕರಿಗೆ ವಿವಿಧ ಕ್ರೀಡೆಗಳನ್ನು ಆಡಿಸಿದರು. ಮುಖ್ಯ ಶಿಕ್ಷಕಿ ನಿರ್ಮಲಾ ಹಿರೇಮಠ ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

### ಸಂಸ್ಕೃತಿ-ಸಂಸ್ಕಾರ ಜಾಗೃತಿಗೆ ಸದೃಢ ರಾಷ್ಟ್ರ ನಿರ್ಮಾಣ-ಡಾ. ಬಂಡ್ರಿ ವಿಶ್ವನಾಥ್

# ಇಂದು ಬೃಹತ್ ಹಿಂದೂ ಸಮಾವೇಶ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ



ಹಿಂದೂ ಸಮಾಜದ ಸಂಸ್ಕೃತಿ, ಪರಂಪರೆ ಹಾಗೂ ಸಂಸ್ಕಾರಗಳನ್ನು ಮುಂದಿನ ಪೀಳಿಗೆಗೆ ಕೊಂಡೊಯ್ಯುವ ಮೂಲಕ ಸಧೃಢ ಸಮಾಜ ಹಾಗೂ ಸಧೃಢ ರಾಷ್ಟ್ರ ನಿರ್ಮಾಣ ಮಾಡುವುದು ಹಿಂದೂ ಸಮಾವೇಶದ ಮುಖ್ಯ ಉದ್ದೇಶವಾಗಿದೆ ಎಂದು ಹಿಂದೂ ಸಮಾವೇಶ ಸಮಿತಿ ಅಧ್ಯಕ್ಷ ಡಾ. ಬಂಡ್ರಿ ವಿಶ್ವನಾಥ್ ಹೇಳಿದರು.

ಶನಿವಾರ ಮಧ್ಯಾಹ್ನ ಯು.ಕೆ. ಕೊಟ್ರಬಸಪ್ಪ ಅವರ ಜಾಗದಲ್ಲಿ ನಡೆಯಲಿರುವ ಬೃಹತ್ ಹಿಂದೂ ಸಮಾವೇಶದ ಹಿನ್ನೆಲೆಯಲ್ಲಿ ಶುಕ್ರವಾರ ಏರ್ಪಡಿಸಿದ್ದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಹಿಂದೂ ಸಮಾಜವು ವಿವಿಧ ಜಾತಿ, ಪಂಥ ಹಾಗೂ ಪದ್ಧತಿಗಳನ್ನು ಒಳಗೊಂಡ ಮಹಾಸಮುದ್ರದಂತಿದ್ದು, ಹಲವು ನದಿಗಳು ಸೇರಿ ಸಮುದ್ರವಾಗುವಂತೆ ಎಲ್ಲಾ ವರ್ಗದ ಜನರು ಒಂದೇ ಸಮಾಜದಲ್ಲಿ ಬದುಕುತ್ತಿದ್ದಾರೆ. ಆದರೆ ಇತ್ತೀಚಿನ ದಿನಗಳಲ್ಲಿ ಸಾಮಾಜಿಕ ಜಾಲತಾಣಗಳಿಂದ ಸಮಾಜದ ಮನೋಭಾವಗಳು ಕಲುಷಿತಗೊಳ್ಳುತ್ತಿದ್ದು, ಸತ್ಯ-ಸುಳ್ಳಿನ ವ್ಯತ್ಯಾಸ ಅರಿಯದೇ ವಾಸ್ತವತೆ ಮರೆಮಾಚುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

> ಹಿಂದೂ ಸಮಾವೇಶವು ಯಾರ ವಿರುದ್ಧವೂ ಅಲ್ಲ. ಸಮಾಜ ಒಂದು ಕುಟುಂಬದಂತಿದ್ದು, ಕುಟುಂಬದ ಸದಸ್ಯರು ಒಂದೆಡೆ ಸೇರುವಂತೆ ಸಮಸ್ತ ಸಮಾಜದ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಮಾವೇಶವನ್ನು ಯಶಸ್ವಿಗೊಳಿಸಬೇಕೆಂದು ಡಾ. ಬಂಡ್ರಿ ವಿಶ್ವನಾಥ್ ಮನವಿ ಮಾಡಿದರು.

ಈ ಕಾರಣಗಳಿಂದ ಸನಾತನ ಹಿಂದೂ ಧರ್ಮದ ಆಚಾರ-ವಿಚಾರ, ಸಂಸ್ಕೃತಿ-ಸಂಸ್ಕಾರಗಳು ನಶಿಸುವ ಸ್ಥಿತಿಗೆ ತಲುಪುತ್ತಿವೆ. ಜಗತ್ತಿನಲ್ಲೇ ವಿಶಿಷ್ಟವಾದ ನಮ್ಮ ಪರಂಪರೆಯನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ, ಜಾತ್ಯತೀತ ಹಾಗೂ ರಾಜಕೀಯೇತರವಾಗಿ ಬೃಹತ್ ಹಿಂದೂ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ. ರಾಷ್ಟ್ರಭಕ್ತಿ ಹಾಗೂ ರಾಷ್ಟ್ರಪ್ರೇಮವನ್ನು ಮೂಡಿಸಿ ಭಾರತವನ್ನು ವಿಶ್ವಗುರು ರಾಷ್ಟ್ರವನ್ನಾಗಿ ರೂಪಿಸುವ ಗುರಿಯೊಂದಿಗೆ ಈ ಸಮಾವೇಶವನ್ನು ಆಯೋಜಿಸಲಾಗಿದೆ ಎಂದರು.

ಪುರಸಭೆ ಸದಸ್ಯ ನವೀನ್ ಕುಮಾರ್ ಮಾತನಾಡಿ, ಜಾತಿ ಭೇದ ಮರೆತು 'ನಾವೆಲ್ಲ ಒಂದು' ಎಂಬ ಐಕ್ಯತೆಯ ಸಂದೇಶವನ್ನು ಹಿಂದೂ ಸಮಾವೇಶ ಸಾರಬೇಕಾಗಿದೆ. ಸರ್ವ ಜಾತಿಯ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಸೇರಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಮಾವೇಶ ಸಮಿತಿ ಉಪಾಧ್ಯಕ್ಷ ಹಲ್ದಾಳ್ ವಿಜಯಕುಮಾರ್, ಪುರಸಭೆ ಸದಸ್ಯ ಜೋಗಿ ಹನುಮಂತಪ್ಪ, ಮುಖಂಡ ಈ.ಕೆ. ಮೂರ್ತಿ ಮಾತನಾಡಿದರು. ಪ್ರಮುಖರಾದ ಖಜಾಂಚಿ ಬೆಲ್ಲಂಕೊಂಡ ರಮೇಶ್, ಕಾರ್ಯದರ್ಶಿ ಡಾ. ಅಜೇಯ್ ರೊಟ್ಟಿ, ಕೊಟ್ರಪ್ಪ, ಸೋಮನಗೌಡ, ದಾನಯ್ಯ, ಬಿ.ಎಸ್. ಸುಭಾಷ್, ಅವಿನಾಶ್, ಗಜಾಪುರ ಕರಿಬಸಪ್ಪ, ನಿವೃತ್ತ ಇಒ ಟಿ. ವೆಂಕೋಬಪ್ಪ, ಅಡೂರು ಬಸವರಾಜ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಬೃಹತ್ ಹಿಂದೂ ಸಮ್ಮೇಳನ ನಾಳೆ




■ವಿಜಯಸಾಕ್ಷಿ ಸುದ್ದಿ, ಗದಗ

ಹಿಂದೂ ಸಮಾಜದ ಒಗ್ಗೂಡುವಿಕೆ ಹಾಗೂ ಸನಾತನ ಸಂಸ್ಕೃತಿಯ ರಕ್ಷಣೆಯ ಉದ್ದೇಶದೊಂದಿಗೆ ಫೆಬ್ರವರಿ 8ರಂದು ಬೆಟಗೇರಿಯ ರಂಗಪ್ಪಜ್ಜನ ಮಠದ ಆವರಣದಲ್ಲಿ ಬೃಹತ್ ಹಿಂದೂ ಸಮ್ಮೇಳನವನ್ನು ಆಯೋಜಿಸಲಾಗಿದೆ ಎಂದು ಸಮ್ಮೇಳನದ ಅಧ್ಯಕ್ಷ ಮುದಕಪ್ಪ ಹೋಡಿ ತಿಳಿಸಿದರು.

ಶುಕ್ರವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶಾದ್ಯಂತ ನಡೆಯುತ್ತಿರುವ ಹಿಂದೂಗಳ ಒಗ್ಗಟ್ಟಿನ ಮಂತ್ರದ ಫಲವಾಗಿ ಬೆಟಗೇರಿಯಲ್ಲಿ ಈ ಅಭೂತಪೂರ್ವ ಸಮಾವೇಶ ಜರುಗುತ್ತಿದೆ. ಸಮಾಜದ ಹಿರಿಯರು, ಮಾತೆಯರು ಹಾಗೂ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದರು.

ಆಯೋಜಕ ಚಂದ್ರು ಕರಿಸೋಮನಗೌಡರ ಮಾತನಾಡಿ, ಸಮ್ಮೇಳನದ ಅಂಗವಾಗಿ ಮಧ್ಯಾಹ್ನ 2.30ಕ್ಕೆ ಕುರಹಟ್ಟಿಪೇಟೆಯಿಂದ ಹಾಗೂ ಶ್ರೀ ಹಳೇ ಬನಶಂಕರಿ ದೇವಸ್ಥಾನದಿಂದ ಎರಡು ಪ್ರತ್ಯೇಕ ಶೋಭಾಯಾತ್ರೆಗಳು ಆರಂಭವಾಗಲಿವೆ. ಈ ಎರಡೂ ಮೆರವಣಿಗೆಗಳು ಮಹಾರಾಣಾ ಪ್ರತಾಪ್ ಸರ್ಕಲ್‌ನಲ್ಲಿ ಸಂಗಮಗೊಂಡು, ಬೃಹತ್ ಶೋಭಾಯಾತ್ರೆಯಾಗಿ ಪರಿವರ್ತನೆಗೊಂಡು ರಂಗಾವಧೂತ ಮಠದ ವೇದಿಕೆಯವರೆಗೆ ಸಾಗಲಿವೆ ಎಂದು ಮಾಹಿತಿ ನೀಡಿದರು.

ಶೋಭಾಯಾತ್ರೆಯಲ್ಲಿ ವಿವಿಧ ಸಮಾಜಗಳ ಋಷಿಮುನಿಗಳ ಹಾಗೂ ದೇವರ ಸ್ತಬ್ಧಚಿತ್ರಗಳು, ವಾದ್ಯಮೇಳಗಳು ಕಳೆಗಟ್ಟಲಿವೆ. ಪಾಲ್ಗೊಳ್ಳುವವರು ಸಾಂಪ್ರದಾಯಿಕ ಉಡುಪು ಹಾಗೂ ಕೇಸರಿ ಶಲ್ಯ ಧರಿಸಲಿದ್ದಾರೆ. ಹೊಸಳ್ಳಿಯ ಅಭಿನವ ಬೂದೀಶ್ವರ ಸ್ವಾಮಿಗಳು, ನೀಲಕಂಠ ಪಟ್ಟದಾರ್ಯ ಸ್ವಾಮಿಗಳು, ಶಂಕರಾನಂದ ಮಹಾಸ್ವಾಮಿಗಳು, ವೀರಭದ್ರ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ರಾಮಕೃಷ್ಣ ವಿವೇಕಾನಂದ ಆಶ್ರಮದ ಸ್ವಾಮಿ ಜಗನ್ನಾಥಾನಂದ ಮಹಾರಾಜ್ ಸಾನ್ನಿಧ್ಯ ವಹಿಸಲಿದ್ದಾರೆ. ಮುಖ್ಯ ಭಾಷಣಕಾರರಾಗಿ ಆರ್‌ಎಸ್‌ಎಸ್ ಪ್ರಾಂತ ಪ್ರಚಾರಕ ನರೇಂದ್ರ ಜೀ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸಂಘಟಕರಾದ ಚನ್ನವೀರಪ್ಪ ಚನ್ನಪ್ಪನವರ, ರಾಘವೇಂದ್ರ ಯಳವತ್ತಿ, ಶ್ರೀನಿವಾಸ ಹುಬ್ಬಳ್ಳಿ, ರಾಮಕೃಷ್ಣ ಪಾಂಡ್ರೆ, ಮಹೇಶ ಹಿಂಡಿ, ರವಿಕುಮಾರ ಗಂಜಿ, ಮಹೇಶ ಕರಿಬಿಷ್ಠಿ ಮುಂತಾದವರಿದ್ದರು.

## ದೆಹಲಿ: ಜಲ ಮಂಡಳಿ ತೋಡಿದ ಗುಂಡಿಗೆ ಬಿದ್ದು ಬೈಕ್ ಸವಾರ ಸಾವು; ತನಿಖೆಗೆ ಆದೇಶಿಸಿದ ಸರ್ಕಾರ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಪಶ್ಚಿಮ ದೆಹಲಿಯ ಜನಕಪುರಿ ಪ್ರದೇಶದಲ್ಲಿ ದೆಹಲಿ ಜಲ ಮಂಡಳಿ (ಡಿಜೆಬಿ) ನಿರ್ಮಾಣ ಕಾರ್ಯಕ್ಕಾಗಿ ಅಗೆದ ಹೊಂಡಕ್ಕೆ ಬೈಕ್ ಬಿದ್ದು ಸವಾರನೊಬ್ಬ ಸಾವನ್ನಪ್ಪಿದ್ದಾನೆ ಎಂದು ಪೊಲೀಸರು ಶುಕ್ರವಾರ ತಿಳಿಸಿದ್ದಾರೆ. ಘಟನೆಯ ಬಗ್ಗೆ ತನಿಖೆಗೆ ದೆಹಲಿ ಸರ್ಕಾರ ಆದೇಶಿಸಿದೆ.

ಸಾವಿಗೆ ಕಾರಣವಾದ ಸಂದರ್ಭಗಳ ಕುರಿತು ವಿವರವಾದ ವರದಿಯನ್ನು ಸರ್ಕಾರ ಕೇಳಿದೆ ಎಂದು ನಗರಾಭಿವೃದ್ಧಿ ಸಚಿವ ಆಶಿಶ್ ಸೂದ್ ಹೇಳಿದ್ದಾರೆ.

ಕೈಲಾಸಪುರಿ ನಿವಾಸಿ ಕಮಲ್ ಎಂದು ಗುರುತಿಸಲಾದ ಸಂತ್ರಸ್ತ ಶುಕ್ರವಾರ ಮುಂಜಾನೆ ತನ್ನ ಮೋಟಾರ್ ಸೈಕಲ್‌ನೊಂದಿಗೆ ಗುಂಡಿಯೊಳಗೆ ಶವವಾಗಿ ಪತ್ತೆಯಾಗಿದ್ದಾನೆ. ಅವರು ಖಾಸಗಿ ಬ್ಯಾಂಕಿನ ಕಾಲ್ ಸೆಂಟರ್‌ನಲ್ಲಿ ಕೆಲಸ ಮಾಡುತ್ತಿದ್ದರು ಎಂದು ಪಿಟಿಐ ವರದಿ ಮಾಡಿದೆ.

ಬೆಳಿಗ್ಗೆ 7 ಗಂಟೆ ಸುಮಾರಿಗೆ ಘಟನೆಯ ಬಗ್ಗೆ ಮಾಹಿತಿ ಪಡೆದ ಪೊಲೀಸರು ಸ್ಥಳಕ್ಕೆ ದೌಡಾಯಿಸಿದ್ದಾರೆ. ಪ್ರಾಥಮಿಕ ತನಿಖೆಯಲ್ಲಿ ಆ ಹೊಂಡವು ನಡೆಯುತ್ತಿರುವ ಡಿಜೆಬಿ ಯೋಜನೆಯ ಭಾಗವಾಗಿದ್ದು, ಬ್ಯಾರಿಕೇಡ್ ಹಾಕಲಾಗಿತ್ತು ಎಂದು ಹಿರಿಯ ಅಧಿಕಾರಿಯೊಬ್ಬರು ಪಿಟಿಐಗೆ ತಿಳಿಸಿರುವುದಾಗಿ ವರದಿಯಾಗಿದೆ. ಆದಾಗಲೂ, ಕಮಲ್ ಅವರ ಕುಟುಂಬವು ಜಲ ಮಂಡಳಿಯ ನಿರ್ಲಕ್ಷ್ಯವನ್ನು ಆರೋಪಿಸಿದೆ ಮತ್ತು ಅಕ್ರಮದ ಅನುಮಾನವನ್ನು ಹುಟ್ಟುಹಾಕಿದೆ.

ಸಂಬಂಧಿಕರ ಪ್ರಕಾರ, ಕಮಲ್ ಗುರುವಾರ ತಡರಾತ್ರಿ ರೋಹಿಣಿಯಲ್ಲಿರುವ ತನ್ನ ಕಚೇರಿಯಿಂದ ಮನೆಗೆ ಹಿಂತಿರುಗುತ್ತಿದ್ದರು ಮತ್ತು ಅವರೊಂದಿಗೆ ನಿರಂತರ ಸಂಪರ್ಕದಲ್ಲಿದ್ದರು. ಅವರು ಮನೆಗೆ ತಲುಪಲು ವಿಫಲವಾದಾಗ, ಕುಟುಂಬವು ರಾತ್ರಿಯಿಡೀ ಅವರನ್ನು ಹುಡುಕಿತು ಮತ್ತು ಜನಕಪುರಿ, ಸಾಗರ್‌ಪುರ, ವಿಕಾಸ್ ಪುರಿ ಮತ್ತು ರೋಹಿಣಿ ಸೇರಿದಂತೆ ಹಲವಾರು ಪೊಲೀಸ್ ಠಾಣೆಗಳನ್ನು ಸಂಪರ್ಕಿಸಿತು. ಬೆಳಿಗ್ಗೆ 7.30ರ ಸುಮಾರಿಗೆ ಕಮಲ್ ಅವರ ಮೃತದೇಹವನ್ನು ಗುಂಡಿಯಿಂದ ಹೊರತೆಗೆದಿದ್ದಾರೆ ಎಂದು ಅವರಿಗೆ ತಿಳಿಸಲಾಯಿತು. ಘಟನೆಗಳ ನಿಖರವಾದ ಅನುಕ್ರಮವನ್ನು ಖಚಿತಪಡಿಸಿಕೊಳ್ಳಲು ಕುಟುಂಬವು ಎತ್ತಿರುವ ಆರೋಪಗಳು ಸೇರಿದಂತೆ ಎಲ್ಲಾ ಕೋನಗಳನ್ನು ಪರಿಶೀಲಿಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ನಿಧನ

### ಶಿವವ್ವ ಸಂಕಣ್ಣವರ್



**ಗದಗ:** ಜಿಲ್ಲೆಯ ರೋಣ ತಾಲೂಕಿನ ಕೊತಬಾಳ ಗ್ರಾಮದ ನಿವಾಸಿ ಶಿವವ್ವ ಶರಣಪ್ಪ ಸಂಕಣ್ಣವರ (71) ಶುಕ್ರವಾರ ನಿಧನರಾದರು. ಮೃತರು ಪತಿ, ನಾಲ್ಕು ಜನ ಹೆಣ್ಣು ಮಕ್ಕಳು, ಒರ್ವ ಗಂಡು ಮಗ, ಮೊಮ್ಮೊಕ್ಕಳು ಸೇರಿದಂತೆ ಅಪಾರ ಬಂಧು ಬಳಗವನ್ನು ಹೊಂದಿದ್ದರು.

# ಲಕ್ಕುಂಡಿಯ ಗತವೈಭವ ಅಂತಾರಾಷ್ಟ್ರೀಯ ಮಟ್ಟದಲ್ಲಿ ಪಸರಿಸಲಿ

▸▸ಮೊದಲನೇ ಪುಟದಿಂದ



ನಾಗರಿಕರು ಅರ್ಥ ಮಾಡಿಕೊಳ್ಳಬೇಕು. ಇತಿಹಾಸವನ್ನು ಹೆಕ್ಕಿ ತೆಗೆಯಲು ಸಹಕರಿಸಬೇಕು ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಪ್ರಾಧಿಕಾರದ ಕಚೇರಿಯಲ್ಲಿ ಒಂದು ರಜಿಸ್ಟರ್ ಹಾಗೂ ಕ್ಯಾಮರಾವನ್ನು ಇಡಲಾಗಿದ್ದು, ಗ್ರಾಮಸ್ಥರು, ಹಿರಿಯರು, ಅನುಭವಿಕರು ಹೇಳುವ ಅಂಶಗಳನ್ನು ಇಲ್ಲಿ ದಾಖಲಿಸುವ ಕಾರ್ಯವಾಗಬೇಕು ಎಂದು ಸಚಿವರು ನಿರ್ದೇಶನ ನೀಡಿದರು.

ನರಗುಂದ ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ಲಕ್ಕುಂಡಿಗೆ ಹೊಸ ಸ್ವರೂಪ ನೀಡಲು ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲರು ಅನುದಾನ ನೀಡಿದ್ದಾರೆ. ಇದರೊಂದಿಗೆ ಗ್ರಾಮಸ್ಥರ ಸಹಕಾರವೂ ಸಹ ಇದೆ. ಎಂದೂ ಕಂಡರಿಯದ ಪ್ರಾಚ್ಯಾವಶೇಷದ ಉತ್ಖನನ ಕಾರ್ಯ ಇದಾಗಿದೆ ಎಂದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಶಾಸಕ ಎಸ್.ವಿ. ಸಂಕನೂರ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ರಾಜ್ಯ ಸಮಿತಿ ಸದಸ್ಯರಾದ ಸಿದ್ಧಲಿಂಗೇಶ್ವರ ಎಚ್.ಪಾಟೀಲ, ಅ.ಧ. ಕಟ್ಟಿಮನಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಆಯುಕ್ತ ಎ. ದೇವರಾಜ್, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಕೊಟ್ರೇಶ್ವರ ವಿಭೂತಿ, ತೇಜೇಶ್ವರ ಸೇರಿದಂತೆ ಗಣ್ಯರು, ಪ್ರಮುಖರು, ಗ್ರಾಮದ ಹಿರಿಯರು ಹಾಜರಿದ್ದರು.

ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿ ಡಾ. ಕೆ.ವಿ. ತ್ರಿಲೋಕಚಂದ್ರ ಪ್ರಾಸ್ತಾವಿಕವಾಗಿ ಮಾತನಾಡಿದರು. ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಡಾ. ಶರಣು ಗೋಗೇರಿ ಸ್ವಾಗತಿಸಿದರು.

### ತಾಲೂಕು ಮಟ್ಟದ ಮಿಶ್ರ ತಳಿ ಹಸುಗಳ ಅಧಿಕ ಹಾಲು ಕರೆಯುವ ಸ್ಪರ್ಧೆ, ಜಾನುವಾರು ಪ್ರದರ್ಶನ

# ಪಶುಪಾಲನೆಯಲ್ಲಿ ಆಧುನಿಕ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ಗ್ರಾಮೀಣ ಕೃಷಿ ಮತ್ತು ಪಶುಪಾಲನೆಯ ಪರಂಪರಾಗತ ಕಲೆಯನ್ನು ಉಳಿಸುವುದರ ಜೊತೆಗೆ ಇಂದಿನ ಆಧುನಿಕ ತಂತ್ರಜ್ಞಾನದೊಂದಿಗೆ ಕೃಷಿಕರು ಹೊಂದಿಕೊಳ್ಳಬೇಕು ಎಂದು ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ ಹೇಳಿದರು.

ತಾಲೂಕಿನ ಕಣವಿ ಗ್ರಾಮವ ಅಲ್ಲಮಪ್ರಭು ಜಾತ್ರಾ ಬಯಲು ಪ್ರದೇಶದಲ್ಲಿ ಜಿಲ್ಲಾ ಪಂಚಾಯತ, ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಗದಗ, ಧಾರವಾಡ, ಗದಗ ಮತ್ತು ಉತ್ತರ ಕನ್ನಡ ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ಧಾರವಾಡ, ಕೆಸಿಸಿ ಬ್ಯಾಂಕ್ ಧಾರವಾಡ, ಕಣವಿ ಹಾಲು ಉತ್ಪಾದಕರ ಸಂಘ ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ ಕಣವಿ ಇವರ ಸಂಯುಕ್ತಾಶ್ರಯದಲ್ಲಿ ತಾಲೂಕು ಮಟ್ಟದ ಮಿಶ್ರ ತಳಿ ಹಸುಗಳ ಅಧಿಕ ಹಾಲು ಇಳುವರಿ ಸ್ಪರ್ಧೆ, ಬೃಹತ್ ಜಾನುವಾರು ಪ್ರದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂತಹ ಸ್ಪರ್ಧೆಗಳು ಮತ್ತು ಪ್ರದರ್ಶನಗಳು ಕೃಷಿಕರಲ್ಲಿನ ಸ್ಪರ್ಧಾತ್ಮಕ ಭಾವನೆಯನ್ನು ಹೆಚ್ಚಿಸುವುದರ ಜೊತೆಗೆ, ವೈಜ್ಞಾನಿಕ ಪಶುಪಾಲನೆಗೆ ಉತ್ತೇಜನ ನೀಡುತ್ತದೆ. ಈ ಕಾರ್ಯಕ್ರಮವು ಕೃಷಿಕರು ಮತ್ತು ಪಶುಪಾಲಕರಿಗೆ ತಮ್ಮ ಅನುಭವ ಮತ್ತು ಜ್ಞಾನವನ್ನು ಹಂಚಿಕೊಳ್ಳಲು, ಹೊಸ ತಂತ್ರಜ್ಞಾನಗಳನ್ನು ತಿಳಿಯಲು ಮತ್ತು ಪರಸ್ಪರ ಸ್ನೇಹ ಬೆಳೆಸಿಕೊಳ್ಳಲು ಒಂದು ವೇದಿಕೆಯಾಗಿದೆ. ಇದು ಗ್ರಾಮೀಣ ಆರ್ಥಿಕತೆಯಲ್ಲಿ ಜಾನುವಾರುಗಳ ಮಹತ್ವವನ್ನು ಸಾಬೀತುಪಡಿಸಿದೆ. ಇಂತಹ ಕಾರ್ಯಕ್ರಮ ಪ್ರತಿವರ್ಷ ಜರುಗಲಿ ಎಂದು ಡಿ.ಆರ್. ಪಾಟೀಲ ಹಾರೈಸಿದರು.



ಮುಖ್ಯ ಪಶು ವೈದ್ಯಾಧಿಕಾರಿ ಡಾ. ಎಚ್.ವೈ. ಹೊನ್ನಿನಾಯ್ಕರ ಅವರು ಪಶುಪಾಲನೆಯ ಆಧುನಿಕ ವಿಧಾನಗಳು, ಪ್ರಾಣಿಗಳ ಆರೈಕೆ, ಪೋಷಣೆ ಮತ್ತು ರೋಗ ನಿರ್ಮೂಲನೆಯ ಕುರಿತು ಮಾತನಾಡಿದರು.

ಕಪ್ಪತಗುಡ್ಡದ ನಂದಿವೇರಿ ಶ್ರೀಮಠದ ಪೂಜ್ಯಶ್ರೀ ಶಿವಕುಮಾರ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಕಣವಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ನಿರ್ದೇಶಕ ಪರಪ್ಪ ಕೋಳಿವಾಡ ಅಧ್ಯಕ್ಷತೆ ವಹಿಸಿದ್ದರು. ಧಾರವಾಡ ಕೆ.ಸಿ.ಸಿ ಬ್ಯಾಂಕ್‌ನ ಅಧ್ಯಕ್ಷ ಶಿವಕುಮಾರಗೌಡ ಪಾಟೀಲ, ನಿರ್ದೇಶಕರಾದ ಸಿ.ಬಿ. ದೊಡ್ಡಗೌಡ, ಸಿ.ಎಂ. ಪಾಟೀಲ, ಧಾರವಾಡ ಹಾಲು ಒಕ್ಕೂಟದ ನಿರ್ದೇಶಕ ಎಚ್.ಜಿ. ಹಿರೇಗೌಡರ, ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಎಸ್.ಎಸ್. ಪಾಟೀಲ, ಕಣವಿ ಹಾಲು ಉತ್ಪಾದಕರ ಸಂಘದ ಅಧ್ಯಕ್ಷ ಪ್ರಕಾಶ ಉಳವಿ, ಮಹದೇವಪ್ಪ ಬಟ್ಟೂರ, ಉಪಾಧ್ಯಕ್ಷ ಎಸ್.ವೈ. ಕೋರಿ, ಪಶುಪಾಲನಾ ಇಲಾಖೆಯ ಉಪನಿರ್ದೇಶಕ ಡಾ. ಎಚ್.ಬಿ. ಹುಲಗಣ್ಣವರ, ಧಾರವಾಡ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕ ಡಿ.ಟಿ. ಕಳಸದ, ವ್ಯವಸ್ಥಾಪಕ ಡಾ. ರಾಕೇಶ ತಲ್ಲೂರು ಮುಂತಾದವರು ಉಪಸ್ಥಿತರಿದ್ದರು.

ಹಾಲು ಕರೆಯುವ ಸ್ಪರ್ಧೆ ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿತ್ತು. ಗ್ರಾಮದ ಸುತ್ತಮುತ್ತಲಿನ ಪ್ರದೇಶಗಳಿಂದ ನೂರಾರು ಮಹಿಳಾ ಮತ್ತು ಪುರುಷ ಪಶುಪಾಲಕರು ತಮ್ಮ ಕೌಶಲ್ಯವನ್ನು ಪ್ರದರ್ಶಿಸಿದರು. ನಿಗದಿತ ಸಮಯದಲ್ಲಿ ಹಸುಗಳಿಂದ ಗರಿಷ್ಠ ಪ್ರಮಾಣದ ಹಾಲು ಕರೆಯಲಾಯಿತು. ಎಚ್.ಎಫ್. ವಿಭಾಗದಲ್ಲಿ ವಿರೇಶ ಅರಳಿ–ಪ್ರಥಮ, ಅಕ್ಷಯ ಬಟ್ಟೂರ–ದ್ವಿತಿಯ ಹಾಗೂ ಶಿವಾನಂದ ಉಡಚಣ್ಣವರ–ತೃತೀಯ ಸ್ಥಾನ ಪಡೆದರು. ಜೆಆರ್ ವಿಭಾಗದಲ್ಲಿ ಷಣ್ಮುಖಪ್ಪ ಪೂಜಾರ–ಪ್ರಥಮ ಹಾಗೂ ಶಿವಾನಂದ ಉಡಚಣ್ಣವರ ದ್ವಿತಿಯ ಸ್ಥಾನ ಪಡೆದರು. ವಿಜೇತರಿಗೆ ನಗದು ಬಹುಮಾನ ನೀಡಲಾಯಿತು.

### ಜಾನುವಾರು ಪ್ರದರ್ಶನ

ಈ ಸ್ಪರ್ಧೆಯಲ್ಲಿ ಉತ್ತಮವಾದ ಜಾನುವಾರು ಪ್ರದರ್ಶನವೂ ಜರುಗಿತು. ಸುತ್ತಲಿನ ಗ್ರಾಮಗಳ ಕೃಷಿಕರು ತಮ್ಮ ಆರೋಗ್ಯವಂತ, ವಂಶವಾಹಿ ಮತ್ತು ಉತ್ತಮ ಗುಣಲಕ್ಷಣಗಳ ಹಸುಗಳನ್ನು ಪ್ರದರ್ಶನಕ್ಕೆ ತಂದಿದ್ದರು. ಪ್ರಾಣಿಗಳ ಆರೋಗ್ಯ, ದೇಹರಚನೆ, ತಳಿಯ ಶುದ್ಧತೆ ಮತ್ತು ಉತ್ಪಾದನಾ ಸಾಮರ್ಥ್ಯದ ಆಧಾರದ ಮೇಲೆ ಅವುಗಳನ್ನು ಮೌಲ್ಯಮಾಪನ ಮಾಡಲಾಯಿತು.

# ತಾಲೂಕು ಪಂಚಾಯಿತಿ ಸಾಮಾನ್ಯ ಸಭೆ



■ **ವಿಜಯಸಾಕ್ಷಿ ಸುದ್ದಿ, ರೋಣ**

ರೋಣ ತಾಲೂಕು ಪಂಚಾಯಿತಿಯ ಆಡಳಿತಾಧಿಕಾರಿ, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕಿ ಡಾ. ನಂದಾ ಹಣಬರಟ್ಟಿ ಇವರ ಅಧ್ಯಕ್ಷತೆಯಲ್ಲಿ ತಾಲೂಕು ಪಂಚಾಯಿತಿ ಸಾಮಾನ್ಯ ಸಭೆ ಗುರುವಾರ ಜರುಗಿತು.

ತಾಲೂಕು ವ್ಯಾಪ್ತಿಯಲ್ಲಿನ ವಿವಿಧ ಇಲಾಖೆಗಳ ಪ್ರಗತಿ ವರದಿಗಳನ್ನು ಪರಿಶೀಲಿಸಿದ ಡಾ. ನಂದಾ ಹಣಬರಟ್ಟಿ, ಪ್ರಸ್ತುತ ಆರ್ಥಿಕ ವರ್ಷ ಅಂತ್ಯದ ಹಂತದಲ್ಲಿರುವುದರಿಂದ ಯಾವುದೇ ಯೋಜನೆಯ ಅನುದಾನ ವ್ಯಯವಾಗದೆ ಉಳಿಯದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಫಲಿತಾಂಶ ಉತ್ತಮವಾಗುವಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳು ವಿಶೇಷ ಗಮನ ನೀಡಿ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕೆಂದು ಸೂಚನೆ ನೀಡಿದರು.

ಭೂಸೇನಾ ನಿಗಮದ ವತಿಯಿಂದ ಕೈಗೊಳ್ಳಲಾಗಿರುವ ಕಾಮಗಾರಿಗಳು ವಿಳಂಬ ವಾಗುತ್ತಿರುವ ಕುರಿತು ಸಾರ್ವಜನಿಕರಿಂದ ದೂರುಗಳು ಬಂದಿರುವುದನ್ನು ಉಲ್ಲೇಖಿಸಿದ ಅವರು, ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಸ್ಪಂದಿಸಿ ನಿಗದಿತ ಅವಧಿಯಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಭೆಯಲ್ಲಿ ತಾ.ಪಂ ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ, ತಾ.ಪಂ ವ್ಯವಸ್ಥಾಪಕ ದೇವರಾಜ್ ಸಜ್ಜನಶೆಟ್ಟರ್ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

ಸಭೆಯ ಬಳಿಕ ತಾಲೂಕಾ ಕ್ರೀಡಾಂಗಣದಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ಸರಕಾರಿ ಈಜುಕೊಳದ ಪರಿಶೀಲನೆ ನಡೆಸಿ, ಶೀಘ್ರವಾಗಿ ಕಾಮಗಾರಿ ಮುಗಿಸಲು ಸೂಚಿಸಿದರು.

ಬಳಿಕ ಪ್ರೌಢಶಾಲೆಗೆ ಭೇಟಿ ನೀಡಿ ಮಕ್ಕಳ ವಿದ್ಯಾಭ್ಯಾಸ ಸೇರಿದಂತೆ ವಿಶೇಷ ತರಗತಿ ತೆಗೆದುಕೊಳ್ಳಲು ಶಿಕ್ಷಕರಿಗೆ ತಿಳಿಸಿದರು.

### ಕೇಂದ್ರ ಸರ್ಕಾರದ ಕಾರ್ಮಿಕ ನೀತಿಗಳ ವಿರುದ್ಧ ಅಖಿಲ ಭಾರತ ಮುಷ್ಕರ

# ಫೆಬ್ರವರಿ 12ರಂದು ತಾಲೂಕಿನಲ್ಲಿ ಬೃಹತ್ ಪ್ರತಿಭಟನೆ

■ **ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಕೇಂದ್ರ ಸರ್ಕಾರ ಜಾರಿಗೊಳಿಸಿರುವ ಕಾರ್ಮಿಕ ವಿರೋಧಿ ನಾಲ್ಕು ಲೇಬರ್ ಕೋಡ್‌ಗಳ ವಿರುದ್ಧ ಫೆಬ್ರವರಿ 12ರಂದು ಕಾರ್ಮಿಕ ಸಂಘಟನೆಗಳು, ರೈತ ಸಂಘಟನೆಗಳ ನೇತೃತ್ವದಲ್ಲಿ ಅಖಿಲ ಭಾರತ ಸಾರ್ವತ್ರಿಕ ಮುಷ್ಕರ ಹಮ್ಮಿಕೊಳ್ಳಲಾಗಿದೆ ಎಂದು ಕಾರ್ಮಿಕ ಸಂಘಟನೆಗಳು ತಿಳಿಸಿವೆ.

ಕೇಂದ್ರ ಸರ್ಕಾರ ಜಾರಿಗೊಳಿಸಿರುವ ಕಾರ್ಮಿಕ ವಿರೋಧಿ ಕರಾಳ ಲೇಬರ್ ಕೋಡ್‌ಗಳ ರದ್ದತಿ, ರೈತ ವಿರೋಧಿ ಹಾಗೂ ಜನ ವಿರೋಧಿ ಮಸೂದೆಗಳ ವಾಪಸ್ಸು, ರಾಜ್ಯ ಸರ್ಕಾರ ಜಾರಿಗೆ ತಂದಿರುವ ರೈತ–ಕಾರ್ಮಿಕ ವಿರೋಧಿ ತಿದ್ದುಪಡಿ ಕಾನೂನುಗಳು ಹಾಗೂ ಬಲವಂತದ ಭೂಸ್ವಾಧೀನ ಕ್ರಮಗಳ ಹಿಂಪಡೆಯುವಿಕೆ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈ ಮುಷ್ಕರದ ಮೂಲಕ ಮುಂದಿಟ್ಟುಕೊಳ್ಳಲಾಗಿದೆ.



ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಕಾಯ್ದೆಗೆ ಬದಲಾಗಿ ವಿಬಿ–ಜಿ. ರಾಮ್ ಜಿ ಮಸೂದೆ–2025ನ್ನು ರೂಪಿಸಿರುವುದರಿಂದ ಗ್ರಾಮೀಣ ಜನರ ಉದ್ಯೋಗದ ಹಕ್ಕಿಗೆ ಭಾರೀ ಪೆಟ್ಟು ಬಿದ್ದಿದೆ. ಉದ್ಯೋಗ ಚೀಟಿ ನೀಡುವ ಪ್ರಕ್ರಿಯೆ ಕಠಿಣಗೊಳಿಸಲಾಗಿದ್ದು, ಕೃಷಿ ಋತುವಿನ ಗರಿಷ್ಠ ಅವಧಿಯಲ್ಲಿ 60 ದಿನಗಳ ಉದ್ಯೋಗವನ್ನು ಸ್ಥಗಿತಗೊಳಿಸುವ ಅಧಿಕಾರವನ್ನು ಸರ್ಕಾರಗಳಿಗೆ ನೀಡಲಾಗಿದೆ.

ವೇತನ ಪಾವತಿ, ಉದ್ಯೋಗ ವಿಳಂಬ ಪರಿಹಾರ ಹಾಗೂ ನಿರುದ್ಯೋಗ ಭತ್ಯೆ ನೀಡುವ ಕೇಂದ್ರ ಸರ್ಕಾರದ ಜವಾಬ್ದಾರಿಯನ್ನು ರಾಜ್ಯ ಸರ್ಕಾರಗಳಿಗೆ ವರ್ಗಾಯಿಸಲಾಗಿದೆ ಎಂದು ಸಂಘಟನೆಗಳು ಆರೋಪಿಸಿವೆ.

ವಿದ್ಯುತ್ ತಿದ್ದುಪಡಿ ಮಸೂದೆ–2025 ಮೂಲಕ ವಿದ್ಯುತ್ ಉತ್ಪಾದನೆ, ವಿತರಣೆ ಹಾಗೂ ಸಾಗಣೆಯನ್ನು ಸಂಪೂರ್ಣ ಖಾಸಗೀಕರಣಗೊಳಿಸಲು ಅವಕಾಶ ಕಲ್ಪಿಸಲಾಗಿದ್ದು, ಇದರಿಂದ ಗ್ರಾಹಕರು ಹಾಗೂ ರೈತರಿಗೆ ಲಭ್ಯವಿದ್ದ ಸಬ್ಸಿಡಿಗಳು ರದ್ದಾಗಲಿವೆ. ಪರಿಣಾಮ ವಿದ್ಯುತ್ ದರ ಮತ್ತಷ್ಟು ಏರಿಕೆಯಾಗಲಿದೆ.

ಪ್ರೀಪೇಡ್ ಹಾಗೂ ಪೋಸ್ಟ್‌ಪೇಡ್ ಸ್ಮಾರ್ಟ್ ಮೀಟರ್‌ಗಳ ಅಳವಡಿಕೆಯನ್ನು ಕಡ್ಡಾಯಗೊಳಿಸಲಾಗುತ್ತಿದೆ ಎಂದು ಪ್ರತಿಭಟನಾಕಾರರು ಆಕ್ಷೇಪ ವ್ಯಕ್ತಪಡಿಸಿದರು.

ಈ ಎಲ್ಲಾ ಕಾರ್ಮಿಕ, ರೈತ, ಕೂಲಿ ಕಾರ್ಮಿಕರು ಹಾಗೂ ಜನವಿರೋಧಿ ನೀತಿಗಳನ್ನು ವಿರೋಧಿಸಿ ಫೆಬ್ರವರಿ 12, 2026ರಂದು ತಾಲೂಕಿನಲ್ಲಿ ಅಖಿಲ ಭಾರತ ಮುಷ್ಕರ ನಡೆಯಲಿದ್ದು, ನೂರಾರು ಸಂಖ್ಯೆಯಲ್ಲಿ ಕಾರ್ಮಿಕರು, ರೈತರು, ಕೂಲಿ ಕಾರ್ಮಿಕರು ಹಾಗೂ ಮಹಿಳೆಯರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಮುಷ್ಕರವು ಸಿಐಟಿಯು ಹಾಗೂ ಇತರೆ ಪ್ರಗತಿಪರ ಸಂಘಟನೆಗಳ ನಾಯಕತ್ವದಲ್ಲಿ ನಡೆಯಲಿದೆ. ಈ ಸಂದರ್ಭದಲ್ಲಿ ಸಿಐಟಿಯು ರಾಜ್ಯ ಉಪಾಧ್ಯಕ್ಷ ಆರ್.ಎಸ್. ಬಸವರಾಜ, ಎಸ್. ಜಗನ್ನಾಥ್, ಬಿ. ಲಕ್ಷ್ಮಣ, ಚರಂತ್, ಕೆ. ಗೌರಮ್ಮ, ಮಲ್ಲಮ್ಮ, ಕರಿಬಸಮ್ಮ, ವಿ. ಕೃಷ್ಣಮೂರ್ತಿ, ಸುರೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಆರ್‌ಎಎಫ್, ಪೊಲೀಸ್ ಪಡೆಯಿಂದ ಪರೇಡ್



■ **ವಿಜಯಸಾಕ್ಷಿ ಸುದ್ದಿ, ರೋಣ**

ನಾಗರಿಕ ಸಮಾಜದಲ್ಲಿ ಭಯವನ್ನು ಹೋಗಲಾಡಿಸಿ ನೆಮ್ಮದಿಯ ಬದುಕು ಕಳೆಯಲು ಕೇಂದ್ರ ಮೀಸಲು ಪಡೆ ಆರ್‌ಎಎಫ್ ಹಾಗೂ ಪೊಲೀಸ್ ಪಡೆಯಿಂದ್ವಪಟ್ಟಣದಲ್ಲಿ ಪರೇಡ್ ನಡೆಯಿತು.

ಶುಕ್ರವಾರ ಮಧ್ಯಾಹ್ನ ಪಟ್ಟಣದ ಸೂಡಿ ವೃತ್ತದಿಂದ ಆರಂಭಗೊಂಡ ಪರೇಡ್ ಮುಲ್ಲಾನಭಾವಿ ವೃತ್ತ, ಪೋತರಾಜನ ಕಟ್ಟೆ, ಜಕ್ಕಲಿ ಕ್ರಾಸ್, ಬಸ್ ನಿಲ್ದಾಣದ ಮೂಲಕ ಪೊಲೀಸ್ ಠಾಣೆ ತಲುಪಿತು.

ಈ ಸಂದರ್ಭದಲ್ಲಿ ಆರ್‌ಎಎಫ್‌ನ ಅಸಿಸ್ಟಂಟ್ ಕಮಾಂಡರ್ ಅನಿಲಕುಮಾರ ಜಾಧವ ಮಾತನಾಡಿ, ಜನರು ಭಯಮುಕ್ತ ವಾತಾವರಣದಲ್ಲಿ ಜೀವನ ನಡೆಸಬೇಕು ಎಂಬ ಮಹತ್ವದ ಉದ್ದೇಶದಿಂದ ಆರ್‌ಎಎಫ್ ಹಾಗೂ ಸ್ಥಳೀಯ ಪೊಲೀಸ್ ಸಿಬ್ಬಂದಿಗಳಿಂದ ಪರೇಡ್ ನಡೆಸಲಾಗುತ್ತಿದೆ. ಅಲ್ಲದೆ ರೋಣ ಪಟ್ಟಣದ ವಾತವರಣದ ಜೊತೆಗೆ ಇಲ್ಲಿನ ವ್ಯವಸ್ಥೆಯನ್ನು ಅರಿಯುವುದು ಹಾಗೂ ಸಕಾಲಕ್ಕೆ ಆಗಮಿಸಿ ರಕ್ಷಣೆ ನೀಡುವ ಹೊಣೆಗಾರಿಕೆಯನ್ನು ನಾವೆಲ್ಲರೂ ಹೊಂದಿದ್ದೇವೆ ಎಂದರು.

ಡಿವಾಯ್‌ಎಸ್ಪಿ ಪ್ರಭುಗೌಡ ಕಿರೇದಳ್ಳಿ ಮಾತನಾಡಿ, ಸಾರ್ವಜನಿಕರ ರಕ್ಷಣೆ ನಮ್ಮ ಪ್ರಮುಖ ಆದ್ಯತೆಯಾಗಿದ್ದು, ಇಲ್ಲಿ ಕ್ರಿಮಿನಲ್ ಪ್ರಕರಣಗಳನ್ನು ಹತೋಟಿಗೆ ತರಲು ಸಹ ಆರ್‌ಎಎಫ್ ತಂಡ ನಮ್ಮೊಂದಿಗೆ ಸಹಕರಿಸಲಿದೆ. ಮುಖ್ಯವಾಗಿ, ನಾಗರಿಕ ಸಮಾಜ ಸಹ ಪೊಲೀಸರ ಜೊತೆಗೆ ಉತ್ತಮ ಸಂಪರ್ಕವನ್ನು ಹೊಂದಿ ಸಮಾಜಘಾತುಕ ಶಕ್ತಿಗಳ ಬಗ್ಗೆ ಮಾಹಿತಿ ನಿಡಬೇಕು. ಅಪರಾಧ ಪ್ರಕರಣಗಳನ್ನು ತಡೆಗಟ್ಟಲು ಸಾರ್ವಜನಿಕರ ಸಹಭಾಗಿತ್ವ ಅತಿ ಅವಶ್ಯಕ ಎಂದರು.

ಆರ್‌ಎಎಫ್ ಪಿಎಸ್‌ಐ ಜೆ.ಜಿ. ಸುರೇಶ, ಪಿಎಸ್‌ಐ ಪ್ರಕಾಶ ಬಣಕಾರ, ವಿ.ಎಸ್. ಚವಡಿ ಸೇರಿದಂತೆ ನೂರಕ್ಕೂ ಹೆಚ್ಚು ಸಿಬ್ಬಂದಿಗಳು ಪರೇಡ್‌ನಲ್ಲಿ ಭಾಗವಹಿಸಿದ್ದರು.

# ಶ್ರೀಪಾದನಾಯ್ಕ ತಮ್ಮಣ್ಣವರಿಗೆ 'ಜ್ಯೋತಿಷ್ಯ ರತ್ನ' ಪ್ರಶಸ್ತಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ವಂಶ ಪಾರಂಪರಿಕ ವೈದ್ಯರ ಪರಿಷತ್ತು ಮತ್ತು ಕರ್ನಾಟಕ ರಾಜ್ಯ ಅಸ್ಟ್ರಾಲಜಿಸ್ಟ್ ಕೌನ್ಸಿಲ್ ಶಿಗ್ಗಾಂವ ಇವರ ಸಂಯುಕ್ತಾಶ್ರಯದಲ್ಲಿ ಹಾಸನ ನಗರದ ಸಂಗಮೇಶ್ವರ ದೇವಸ್ಥಾನದಲ್ಲಿ ಕರ್ನಾಟಕ ರಾಜ್ಯ ಅಸ್ಟ್ರಾಲಜಿಸ್ಟ್ ಕೌನ್ಸಿಲ್ ಉದ್ಘಾಟನಾ ಸಮಾರಂಭ ಜರುಗಿತು.

ಈ ಕಾರ್ಯಕ್ರಮದ ಸನ್ನಿಧಾನವನ್ನು ಹಾಸನದ ಪರಮಪೂಜ್ಯ ಶ್ರೀ ಶ್ರೀ ಸಂಗಮೇಶ್ವರ ಜುವೇನಹಳ್ಳಿಮಠದ ಮಹಾಸ್ವಾಮಿಗಳು ವಹಿಸಿದ್ದರು. ಕಾರ್ಯಕ್ರಮದ ಆಯೋಜಕರಾದ ಡಾ. ಕಲ್ಪನಾ ಎ.ನಾಡಿಗ್ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಪ್ರಬಂಧ ಸ್ಪರ್ಧೆ, ಕ್ವಿಜ್ ಸ್ಪರ್ಧೆಗಳು ಜರುಗಿದವು.

ಕಾರ್ಯಕ್ರಮದಲ್ಲಿ ಮುಳಗುಂದದ ಶ್ರೀಪಾದನಾಯ್ಕ ಶಂಕರನಾಯ್ಕ ತಮ್ಮಣ್ಣವರ ಇವರಿಗೆ ಜ್ಯೋತಿಷ್ಯ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಇದೇ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಡಾ. ಕಲ್ಪನಾ ಎ.ನಾಡಿಗರು ಶ್ರೀಪಾದನಾಯ್ಕ ಶಂಕರನಾಯ್ಕ ತಮ್ಮಣ್ಣವರವರನ್ನು ಉತ್ತರ ಕರ್ನಾಟಕಕ್ಕೆ ಸಂಸ್ಥೆಯ ಉಪಾಧ್ಯಕ್ಷರಾಗಿ ನೇಮಕ ಮಾಡಿ ಆದೇಶ ಪತ್ರ ನೀಡಿದರು.

ಡಾ. ಸನತ್‌ಕುಮಾರ, ಡಾ. ಕಲ್ಪನಾ ಎ.ನಾಡಿಗ್, ಸೋಮಶೇಖರಯ್ಯ ಪಿ.ಎಲ್ ಜ್ಯೋತಿಷ್ಯರತ್ನ ಪ್ರಶಸ್ತಿಯನ್ನು ಪಡೆದುಕೊಂಡರು. ಡಿ.ಎ. ದೇವರಾಜ ಶಾಸ್ತ್ರಿಗಳು, ಡಾ. ಸನತ್‌ಕುಮಾರ, ಸೋಮಶೇಖರಯ್ಯ ಪಿ.ಎಲ್, ಅರ್ಚಕರಾದ ಶಿವಕುಮಾರ, ಮಂಗಲಮ್ಮ ಎಸ್ ಮುಂತಾದವರು ಉಪಸ್ಥಿತರಿದ್ದರು.



### ಅದ್ಧೂರಿಯಾಗಿ ಜರುಗಿದ ಜಮಾಲಶಾವಲಿ ಶರಣರ ಉರೂಸ್

# ರೈತರ ಜೀವನಾಡಿ ಎತ್ತುಗಳ ಮೆರವಣಿಗೆ



■ **ವಿಜಯಸಾಕ್ಷಿ ಸುದ್ದಿ, ಡಂಬಳ**

ಗ್ರಾಮದ ಹಜರತ ಜಮಾಲಶಾವಲಿ ಶರಣರ ಗಂಧವು ಗುರುವಾರ ಗ್ರಾಮದ ಸರ್ವಧರ್ಮೀಯ ಗುರು–ಹಿರಿಯರ ಸಮ್ಮುಖದಲ್ಲಿ ಅದ್ಧೂರಿಯಾಗಿ ನಡೆಯಿತು. ಗ್ರಾಮ ಚಾವಡಿ ಮಾರ್ಗವಾಗಿ ಅಬ್ದುಲ ಶಾವಲಿ ದರಗಾ, ಮೈಗಲ ಓಣಿ, ಹೇಮರಡ್ಡಿ ಮಲ್ಲಮ್ಮ ಬಡಾವಣೆ, ಮಾಯಮ್ಮ ದೇವಿ ಬಡಾವಣೆ, ಹಾಲಜ್‌ಜನ ದೇವಾಲಯದ ಮುಂಭಾಗದಲ್ಲಿ ಸಾಗಿ ದರಗಾಕ್ಕೆ ಆಗಮಿಸಿತು.

ಶುಕ್ರವಾರ ಹಜರತ್ ಜಮಾಲಶಾವಲಿ ಶರಣರ ಉರೂಸ್ ನಿಮಿತ್ತ ಗ್ರಾಮದಲ್ಲಿ ಸಂಭ್ರಮ ಸಡಗರ ಮನೆಮಾಡಿತ್ತು. ಡಂಬಳ, ಹೊಸ ಡಂಬಳ ಸೇರಿದಂತೆ ವಿವಿಧ ಗ್ರಾಮಗಳಿಂದ ರೈತರು ತಮ್ಮ ಜೀವನಾಡಿಗಳಾದ ಎತ್ತುಗಳಿಗೆ ಮತಾಟಿ, ಹಳದಿ, ಕೆಂಪು, ಹಸಿರು ಬಣ್ಣದ ವಾರ್ನಿಷ್, ಸರಜಂಗ, ಗಂಟೆ, ರಿಬ್ಬನ್, ಬಲೂನ್, ಜುಲಾಗಳನ್ನು ಕಟ್ಟಿ ಶೃಂಗರಿಸಿಕೊಂಡು ವಿವಿಧ ವಾದ್ಯಮೇಳಗಳ ಮೂಲಕ ಗ್ರಾಮದ ಪ್ರಮುಖ ಬೀದಿಗಳಲ್ಲಿ ಎತ್ತುಗಳನ್ನು ಮೆರವಣಿಗೆ ಮಾಡಿದರು. ಹಜರತ ಜಮಾಲಶಾವಲಿ ಶರಣರ ದರಗಾದ ಸುತ್ತ ಎತ್ತುಗಳನ್ನು ಐದು ಸುತ್ತು ಪ್ರದಕ್ಷಿಣೆ ಹಾಕಿಸಿ ಸಕ್ಕರೆ ಓದಿಸುವುದರ ಮೂಲಕ ಭಕ್ತಿಯನ್ನು ಸಮರ್ಪಿಸಿದರು.

ಈ ಸಂದರ್ಭದಲ್ಲಿ ಜಿ.ವಿ. ಹಿರೇಮಠ, ಮುಸ್ಲಿಂ ಸಮಾಜದ ಧರ್ಮಗುರುಗಳಾದ ಖಾದರಸಾಬ ಮುಲ್ಲಾ, ಹನುಮಂತಪ್ಪ ಗದಗಿನ, ಅಂಜುಮನ ಅಧ್ಯಕ್ಷ ಬಶೀರಹಮ್ಮದ ತಾಂಬೋಟಿ, ಸಿದ್ಧಣ್ಣ ನಂಜಪ್ಪನವರ, ಮರಿತೇಮಪ್ಪ ಆದಮ್ಮನವರ, ಮಹೇಶ ಗಡಗಿ, ಗೋಣಿಬಸಪ್ಪ ಕೊರ್ಲಹಳ್ಳಿ, ಬಸವರಡ್ಡಿ ಬಂಡಿಹಾಳ, ಮಲ್ಲಪ್ಪ ಮಠದ, ಮುತ್ತಣ್ಣ ಕೊಂತಿಕಲ್ಲ, ಖಾಜಾಹುಸೇನ ಹೊಸಪೇಟಿ, ಯಂಕಣ್ಣ ಗಡಗಿ, ಶರಣು ಮೇಟಿ, ಸೋಮಣ್ಣ ಗುಡ್ಡದ, ಕೆ.ಕೆ. ಬಂಡಿ, ಶಫಿ ಮೂಲಿಮನಿ, ಬುಡ್ನೇಸಾಬ ಅತ್ತಾರ, ಬಾಬುಸಾಬ ಸರಕಾವಾಸ, ಮರಿಯಪ್ಪ ಸಿದ್ಧಣ್ಣವರ, ಭೀಮಪ್ಪ ಗದಗಿನ, ಆರ್.ಜಿ. ಕೊರ್ಲಹಳ್ಳಿ, ಕುಬೇರಪ್ಪ ಕೊಳ್ಳಾರ, ಇಂತಿಯಾಜ ದಫೇದಾರ, ಬಾಬುಸಾಬ ಮೂಲಿಮನಿ, ಕುಮಾರ ಮಾನೆ, ಜಾಕೀರ ಮೂಲಿಮನಿ, ಎಮ್.ಆರ್. ಆಲೂರ, ರಜಾಕಸಾಬ ಆಲೂರ, ಯಂಕಣ್‌ಷ ಯರಾಶಿ, ಮುರ್ತುಜಾ ಮನಿಯಾರ, ಇಬ್ರಾಹಿಂ ಹೊಸಪೇಟಿ, ಮೋದಿನಸಾಬ ಚಾಂದಖಾನವರ, ನಿಂಗಪ್ಲ ಮಾದರ, ಮಹಮ್ಮದಲಿ ಸರಕಾವಾಸ, ರಾಜು ಜಲಾಲನವರ, ಸದಾಂ ರಜಾಕನವರ, ಸಿಕಂದರ ಸೊರಟೂರ, ಅಬ್ದುಲ್ ಹಳ್ಳಿಕೇರಿ, ಮಹಬೂಬಲಿ ನದ್ದಿಮುಲ್ಲಾ, ಕರಿಂ ಸರಕಾವಾಸ, ನಾಶೀರ ಅತ್ತಾರ, ರಾಯಸಾಬ ಹಳ್ಳಿಕೇರಿ, ಹುಸೇನ ದೊಡ್ಡಮನಿ, ಬಂದು ಜಲಾಲನವರ ಉರುಸ್ ಸಮಿತಿ ಸದಸ್ಯರು, ಗ್ರಾಮದ ಹಿರಿಯರು, ಯುವಕರು ಇದ್ದರು.

# ಕಿಡಿಗೇಡಿಗಳ ಕೃತ್ಯ; ನೀರು ಪೂರೈಕೆಯಲ್ಲಿ ವ್ಯತ್ಯಯ

▶▶ ಮೊದಲನೇ ಪುಟದಿಂದ

ಸಾರ್ವಜನಿಕ ಹಿತಾಸಕ್ತಿಗೆ ಧಕ್ಕೆಯುಂಟುಮಾಡುವ ಇಂತಹ ಕೃತ್ಯಗಳನ್ನು ಜಿಲ್ಲಾಡಳಿತ ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ನೀರು ಸರಬರಾಜಿಗೆ ಅಡ್ಡಿಪಡಿಸುವವರ ವಿರುದ್ಧ ಮುಲಾಜಿಲ್ಲದೇ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ಸಾರ್ವಜನಿಕರು ಸಹಕರಿಸಿ, ಇಂತಹ ಕಿಡಿಗೇಡಿಗಳ ಬಗ್ಗೆ ಯಾವುದೇ ಮಾಹಿತಿ ಇದ್ದಲ್ಲಿ ತಕ್ಷಣ ನಗರಸಭೆ ಅಧಿಕಾರಿಗಳಿಗೆ ಅಥವಾ ಜಿಲ್ಲಾಡಳಿತ ಕಚೇರಿಗೆ ಮಾಹಿತಿ ನೀಡುವಂತೆ ಮನವಿ ಮಾಡಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka